ಜನಮನದ ದನಿ
# ಪ್ರಜೋದಯ
ಸಂಪಾದಕ : ಜೆ.ಆರ್. ಕೆಂಚೇಗೌಡ


ಭಾರತ ತಂಡದ ನಿಕಟಪೂರ್ವ ನಾಯಕ ರೋಹಿತ್ ಶರ್ಮಾ ಅವರು ಅಂತರರಾಷ್ಟ್ರೀಯ ಕ್ರಿಕೆಟ್ ಕೌನ್ಸಿಲ್ ಬ್ಯಾಟರ್‌ಗಳ ರ್‍ಯಾಂಕಿಂಗ್‌ನಲ್ಲಿ (781 ರೇಟಿಂಗ್ ಪಾಯಿಂಟ್ಸ್) ಇದೇ ಮೊದಲ ಬಾರಿ ಅಗ್ರಸ್ಥಾನಕ್ಕೇರಿದ್ದಾರೆ.

30 ಅಕ್ಟೋಬರ್ 2025 ಗುರುವಾರ ಬೆಲೆ ₹ 2.00 ಸಂಪುಟ : 19 ಸಂಚಿಕೆ : 229 | ಪುಟ-4 | ಹಾಸನ | E-mail : prajodayahsn@gmail.com | RNI NO: KARKAN/2007/22629


ವಿಜ್ಞಾನಕ್ಕೆ ಮಹಾನ್ ತಿರುವು ನೀಡಿದ ಚಿರಂಜೀವಿ ಹೆನ್ರಿಕ್ವಾಲ್ಯಾಕ್ಸ್ » 2


ಶೇ.100ರಷ್ಟು ಗುರಿ ಸಾಧಿಸಲು ಸೂಚನೆ » 3


ವಿದ್ಯಾರ್ಥಿ ನಿಲಯಗಳಲ್ಲಿ ಕಳಪೆ ಆಹಾರ ವಿತರಣೆ » 4

# ಸಿಎಂ ಬದಲಾವಣೆ ಚರ್ಚೆಯೇ ಅಪ್ರಸ್ತುತ

## ಸುಖಾ ಸುಮ್ಮನೆ ಮಾತನಾಡಿ ದಣಿಯಬೇಡಿ | ಡಿಸಿಎಂ ಶಿವಕುಮಾರ್ ಮೌನ ಮಂತ್ರ

• ಪ್ರಜೋದಯ ವರದಿ

**ಬೆಂಗಳೂರು:** ಸರ್ಕಾರಕ್ಕೆ ಎರಡೂವರೆ ವರ್ಷ ಪೂರ್ಣಗೊಳ್ಳುತ್ತಿರುವ ಹೊಸ್ತಿಲಲ್ಲಿ ಮುಖ್ಯಮಂತ್ರಿ ಬದಲಾವಣೆ ವಿಚಾರ ವ್ಯಾಪಕ ಚರ್ಚೆಗೀಡಾಗಿದ್ದು, ಆ ಬಗ್ಗೆ ಅನಗತ್ಯ ಚರ್ಚೆ ಬೇಡ. ಸುಖಾ ಸುಮ್ಮನೆ ಮಾತನಾಡಿ ದಣಿಯುವುದು ಬೇಡವೆಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಹೇಳಿದ್ದಾರೆ.

ಹಲವು ದಿನಗಳಿಂದ ರಾಜ್ಯ ರಾಜಕಾರಣದಲ್ಲಿ ಮುಖ್ಯಮಂತ್ರಿ ಬದಲಾವಣೆ, ದಲಿತ ಮುಖ್ಯಮಂತ್ರಿ, ನವೆಂಬರ್ ಕ್ರಾಂತಿ, ಸಂಪುಟ ಪುನಾರಚನೆ ಕುರಿತು ಚರ್ಚೆಗಳ ಮಧ್ಯೆ ಶಿವಕುಮಾರ್ ಅವರ ಈ ಹೇಳಿಕೆ ಮಹತ್ವ ಪಡೆದಿದೆ. ಅಂತಹ ಯಾವುದೇ ವಿಷಯಗಳ ಬಗ್ಗೆ ಅನಗತ್ಯ ಮಾತನಾಡುವುದು ಬೇಡ. ಶಿಕ್ಷಕರ ಮತ್ತು ಪದವೀಧರರ ಚುನಾವಣೆಗೆ ಅಭ್ಯರ್ಥಿಗಳ ಆಯ್ಕೆ ಕುರಿತು ಚಿಂತನೆ ನಡೆದಿದೆ ಎಂದು ಸುದ್ದಿಗಾರರಿಗೆ ಬುಧವಾರ ಪ್ರತಿಕ್ರಿಯಿಸಿದರು.

ಪ್ರತಿ ಕ್ಷೇತ್ರಕ್ಕೂ ನಾಲ್ಕರಿಂದ ಐದು ಜನರು ಉಮೇದುವಾರಿಕೆಗೆ ಅರ್ಜಿ ಸಲ್ಲಿಸಿದ್ದಾರೆ. ನಾನು 8-10 ದಿನಗಳಲ್ಲಿ ಹೆಸರು ಅಂತಿಮಗೊಳಿಸುತ್ತೇನೆ. ಮುಂದಿನ ಸುತ್ತಿನಲ್ಲಿ ಜಿಲ್ಲಾ ಸಚಿವರು ಮತ್ತು ಶಾಸಕರೊಂದಿಗೆ ಚರ್ಚಿಸಿ ಅಭಿಪ್ರಾಯ ಪಡೆಯುತ್ತೇನೆಂದರು.

ಕಾಂಗ್ರೆಸ್ ಭವನ ನಿರ್ಮಾಣ ವಿಚಾರದಲ್ಲಿ ಸಚಿವರು, ಸಂಸದರು, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರು ಸೇರಿ ಯಾರ್ಯಾರು ಆಸಕ್ತಿ ತೋರಿದ್ದಾರೆ. ಯಾರು ತೋರಿಲ್ಲವೆಂದು ವರದಿ ನೀಡುವಂತೆ ಹೈಕಮಾಂಡ್ ನಾಯಕರು ಕೇಳಿದ್ದಾರೆ. ನಾನು ವರದಿ ಸಿದ್ಧಪಡಿಸುತ್ತಿದ್ದು, ಅದನ್ನು ಕಳುಹಿಸಬೇಕು. ಆ ನಂತರ ಅವರು ಶಂಕುಸ್ಥಾಪನೆ ದಿನಾಂಕ ನಿಗದಿ ಮಾಡುತ್ತಾರೆಂದು ವಿವರಿಸಿದರು.

### ಅದೃಷ್ಟವಿದ್ದರೆ ಸಿಎಂ ಆಗ್ತಾರೆ

ಸಹೋದರ ಡಿ.ಕೆ.ಶಿವಕುಮಾರ್ ಅವರನ್ನು ಮುಖ್ಯಮಂತ್ರಿಯಾಗಿ ನೋಡಲು ನಾನು ಬಯಸುತ್ತೇನೆ. ಅವರ ಅದೃಷ್ಟ ಕೈಹಿಡಿದರೆ ಉನ್ನತ ಹುದ್ದೆ ಅಲಂಕರಿಸುತ್ತಾರೆಂದು ಮಾಜಿ ಸಂಸದ ಡಿ.ಕೆ.ಸುರೇಶ್ ಹೇಳಿದ್ದಾರೆ.

» ನಾಲ್ಕನೇ ಪುಟದಲ್ಲಿ



ರಾಜ್ಯದಲ್ಲಿ 100 ಕಾಂಗ್ರೆಸ್ ಭವನಗಳಿಗೆ ಶಂಕುಸ್ಥಾಪನೆ ಮಾಡುವ ಗುರಿ ಹೊಂದಲಾಗಿದೆ. ಕಟ್ಟಡಕ್ಕಾಗಿ ಕೆಲವು ಸ್ಥಳಗಳಲ್ಲಿ ಕಾಗದ ಪತ್ರಗಳು ಸಿದ್ಧವಾಗುತ್ತಿವೆ ಮತ್ತು ಕೆಲವೆಡೆ ಸಿದ್ಧತೆ ನಡೆಯುತ್ತಿವೆ. ಆ ಬಗ್ಗೆ ಹೈಕಮಾಂಡ್‌ಗೆ ವರದಿ ಸಲ್ಲಿಸಲು ತಯಾರಿ ನಡೆಸಿದ್ದೇನೆ. ಇಷ್ಟು ಬಿಟ್ಟರೆ ಯಾವ ವಿಚಾರಗಳ ಬಗ್ಗೆ ಯೋಚಿಸುತ್ತಿಲ್ಲ.

-ಡಿ.ಕೆ.ಶಿವಕುಮಾರ್, ಡಿಸಿಎಂ

### ಸಿದ್ದರಾಮಯ್ಯ ಸಕ್ರಿಯರಾಗಿರಬೇಕು

ನಮಗೆ ಸಿದ್ದರಾಮಯ್ಯ ನಾಯಕತ್ವ ಬೇಕೇ ಬೇಕು. ರಾಜಕಾರಣದಲ್ಲಿ ಅವರು ಸಕ್ರಿಯವಾಗಿರಬೇಕೆಂದು ಕಾರ್ಮಿಕ ಸಚಿವ ಸಂತೋಷ್ ಲಾಡ್ ಅವರು ಹೇಳಿದರು. ಸುದ್ದಿಗಾರರೊಂದಿಗೆ ಮಾತನಾಡಿ, ಸಿದ್ದರಾಮಯ್ಯ ಅವರು ರಾಜಕಾರಣದಿಂದ ನಿವೃತ್ತಿ ಆಗಬಾರದು. ಚುನಾವಣೆಗೆ ನಿಲ್ಲೋದಿಲ್ಲ ಎಂದು ಅವರು ಹೇಳಿ ದರೂ ನಾವು ಒಪ್ಪುವುದಿಲ್ಲವೆಂದರು.

ರಾಜಕಾರಣದಿಂದ ಅವರು ಹೊರಗೆ ಉಳಿಯ ಬಾರದು ಅನ್ನೋದು ನನ್ನ ವಾದ. ರಾಹುಲ್ ಗಾಂಧಿ ಅನಿವಾರ್ಯತೆ ಅಲ್ವಾ, ಅದೇ ರೀತಿ ಸಿದ್ದರಾಮಯ್ಯ ಅವರಿಗೂ ಅನಿವಾರ್ಯತೆ ಇದೆ. ನಾಯಕತ್ವ ಬದಲಾವಣೆ ಸನ್ನಿವೇಶ, ಅನಿವಾರ್ಯತೆ ಇಲ್ಲ. ನಮ್ಮ ಮುಂದೆ ಅಂಥದ್ದೇನೂ ಇಲ್ಲ, ಹೈಕಮಾಂಡ್ ನಿರ್ಧಾರ ಮಾಡಬೇಕೆಂದು ಹೇಳಿದರು.

ಎರಡೂವರೆ ವರ್ಷದ ಬಳಿಕ ಸಚಿವ ಸ್ಥಾನ ತ್ಯಜಿಸಬೇಕೆಂದು ಹೈಕಮಾಂಡ್ ಯಾರ ಬಳಿಯೂ ಮಾತನಾಡಿಲ್ಲ. ನನ್ನ ಬಳಿಯಂತೂ ಯಾರೂ ಈ ರೀತಿ ಹೇಳಿಲ್ಲ. ನನಗೆ ಈ ವಿಚಾರ ಗೊತ್ತಿಲ್ಲ, ಅವರು ಏನು ಹೇಳಿದ್ದಾರೋ ಗೊತ್ತಿಲ್ಲವೆಂದರು.

# ನೀರಾವರಿ ಯೋಜನೆ ಅನುಷ್ಠಾನದಿಂದ ರೈತರ ಉಳಿವು

## ಕೆರೆಗೆ ಬಾಗಿನ ಅರ್ಪಿಸಿ ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ ಅಭಿಮತ

• ಪ್ರಜೋದಯ ವರದಿ

**ಚನ್ನರಾಯಪಟ್ಟಣ:** ನೀರಾವರಿ ಯೋಜನೆಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಿ ಕೆರೆಕಟ್ಟೆಗಳನ್ನು ತುಂಬಿಸುವುದರಿಂದ ರೈತರನ್ನು ಉಳಿಸಲು ಸಾಧ್ಯ. ಈ ಬಗ್ಗೆ ಜನಪ್ರತಿನಿಧಿಗಳು ಹೆಚ್ಚು ಗಮನ ಹರಿಸುವಂತೆ ಆದಿಚುಂಚನಗಿರಿ ಪೀಠಾಧ್ಯಕ್ಷ ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ ಅವರು ಹೇಳಿದರು.

ನುಗ್ಗೇಹಳ್ಳಿ ಹೋಬಳಿ ವ್ಯಾಪ್ತಿಯ ವಳಗೇರಹಳ್ಳಿ-ಅಣತಿ ಗ್ರಾಮದ ಕೆರೆ ಕೋಡಿ ಬಿದ್ದ ಹಿನ್ನಲೆ ಗಂಗೆಪೂಜೆ ನೆರವೇರಿಸಿ, ಬಾಗಿನ ಅರ್ಪಿಸಿ ಮಾತನಾಡಿದ ಅವರು, ಕ್ಷೇತ್ರದ ಶಾಸಕ ಸಿ.ಎನ್.ಬಾಲಕೃಷ್ಣ ಅವರು ಸರ್ಕಾರದ ನೆರವಿನೊಂದಿಗೆ ತಾಲ್ಲೂಕಿನಲ್ಲಿ ಅನೇಕ ನೀರಾವರಿ ಯೋಜನೆಗಳನ್ನು ಅನುಷ್ಠಾನಗೊಳಿಸುವ ಮೂಲಕ ಹಲವಾರು ಕೆರೆಕಟ್ಟೆಗಳನ್ನು ತುಂಬಿಸಿದ್ದಾರೆ.ಇದರಿಂದ ತಾಲೂಕಿನ ರೈತರಿಗೆ ಹೆಚ್ಚು ಅನುಕೂಲವಾಗಿದೆ. ಕರೆಕಟ್ಟೆಗಳನ್ನು ತುಂಬಿಸುವುದರಿಂದ ಆರ್ಥಿಕವಾಗಿ ರೈತರು ಸದೃಢಗೊಳ್ಳುವ ಜೊತೆಗೆ ತಾಲ್ಲೂಕು ಕೂಡ ಅಭಿವೃದ್ಧಿ ಹೊಂದಲು ಸಾಧ್ಯ ಎಂದರು.



ಶಾಸಕ ಸಿ.ಎನ್.ಬಾಲಕೃಷ್ಣ ಅವರು ಮಾತನಾಡಿ, ವಳಗೇರಹಳ್ಳಿ-ಅಣತಿ ಗ್ರಾಮದ ದೊಡ್ಡಕೆರೆ ಸುಮಾರು 1000 ಎಕರೆ ಪ್ರದೇಶದಲ್ಲಿದ್ದು, ಜಿಲ್ಲೆಯಲೇ ಅತೀ ದೊಡ್ಡ ಎರಡನೇ ಕೆರೆಯಾಗಿದೆ. ಕಳೆದ ಹಲವು ವರ್ಷಗಳಿಂದ ನವಿಲೆ ಏತ ನೀರಾವರಿ ಯೋಜನೆಯಿಂದ ಪೈಪ್‌ಲೈನ್ ಮೂಲಕ ಕೆರೆಗೆ ನೀರು ಹರಿಸಲಾಗುತ್ತಿದೆ. ಈ ತಿಂಗಳಲ್ಲಿ ಹೆಚ್ಚು ಮಳೆಯಾಗಿದ್ದರಿಂದ ನಿರೀಕ್ಷೆಗಿಂತ ಮುಂಚೆಯೇ ಕೆರೆ ತುಂಬಿದೆ. ಕೆರೆ ತುಂಬಿರುವುದರಿಂದ ಗಂಡಸಿ ಸೇರಿ ತಿಪಟೂರು ತಾಲ್ಲೂಕು ಭಾಗದ ರೈತರಿಗೂ ಹೆಚ್ಚು ಅನುಕೂಲವಾಗಲಿದೆ. ತಾಲ್ಲೂಕಿನಲ್ಲಿ ಪ್ರಥಮ ಆದ್ಯತೆಯಾಗಿ ಕಳೆದ ಮೂರು ಅವಧಿಗಳಿಂದ ನೀರಾವರಿ ಯೋಜನೆಗಳಿಗೆ ಹೆಚ್ಚಿನ ಒತ್ತು ನೀಡಲಾಗುತ್ತಿದೆ ಎಂದರು. ಆದಿಚುಂಚನಗಿರಿ ಶಾಖಾಮಠದ ಶ್ರೀ ಶಂಭುನಾಥ ಸ್ವಾಮೀಜಿ ಇತರರಿದ್ದರು.

# ಅಧಿಕಾರಿಗಳಿಗೆ ಹೊರೆಯಾದ ಮಹಾನಗರ ಪಾಲಿಕೆ

## ಸಿಬ್ಬಂದಿ ಕೊರತೆ ವಿಪರೀತ | ಕೆಲಸದೊತ್ತಡಕ್ಕೆ ಹೈರಾಣ

• ಪ್ರಜೋದಯ ವರದಿ

**ಹಾಸನ:** ಹಾಸನ ನಗರಸಭೆಯಿಂದ ಮಹಾನಗರ ಪಾಲಿಕೆಯಾಗಿ ಮೇಲ್ದರ್ಜೆಗೇರಿದೆಯಾದರೂ ಅನುದಾನ ಹಾಗು ಸಿಬ್ಬಂದಿ ಕೊರತೆ, ಹೆಚ್ಚಿದ ಕಾರ್ಯದೊತ್ತಡ ಕಾರಣದಿಂದ ಕೆಲಸ ಮಾಡಲು ಅಧಿಕಾರಿಗಳು ಹಿಂದೇಟು ಹಾಕುತ್ತಿದ್ದಾರೆ.

ಆ ಮೂಲಕ ಮಹಾನಗರ ಪಾಲಿಕೆ ಬೇಡದ ವಿಚಾರಗಳಿಗೆ ಹೆಚ್ಚು ಚರ್ಚೆಯಲ್ಲಿದೆ. ತ್ಯಾಜ್ಯ ವಿಲೇವಾರಿ ವಿಚಾರದಲ್ಲಿ ನಿರ್ಲಕ್ಷ್ಯ ವಹಿಸಿದ್ದಾರೆ ಹಾಗು ಸ್ಪಷ್ಟನೆ ನೀಡುವಾಗ ಉಡಾಫೆಯಿಂದ ವರ್ತಿಸಿದರೆಂಬ ಕಾರಣಕ್ಕೆ ಪೌರಾಯುಕ್ತ ಆರ್.ಕೃಷ್ಣಮೂರ್ತಿ ಅವರನ್ನು ಕಡ್ಡಾಯ ರಜೆ ಮೇಲೆ ತೆರಳುವಂತೆ ಆದೇಶಿಸಿರುವ ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಅವರು ಆ ಸ್ಥಾನಕ್ಕೆ ಪ್ರಭಾರಿಯಾಗಿ ಹುಡಾ ಆಯುಕ್ತ ಕೆ.ಎಂ.ರಮೇಶ್ ಅವರನ್ನು ನಿಯೋಜಿಸಿದ್ದಾರೆ. ಹುಡಾ ಪೌರಾಯುಕ್ತರ ಹುದ್ದೆ ನಿಬಾಯಿಸಲು ರಮೇಶ್ ಅವರು ಹಿಂದೇಟು ಹಾಕಿದ್ದಾರೆ ಎನ್ನಲಾಗಿದೆ. ಹುಡಾ ಕಚೇರಿಯಲ್ಲೇ ಬೆಟ್ಟದಷ್ಟು ಕೆಲಸಗಳಿವೆ. ಅದರ ಜೊತೆಗೆ ಪಾಲಿಕೆ ಜಂಜಾಟ ಬೇಡವೆಂದು ಜಿಲ್ಲಾಧಿಕಾರಿಗೆ ನೇರವಾಗಿ ಹೇಳಿದ್ದಾರೆ. ಈ ಬಗ್ಗೆ ಪಾಲಿಕೆ ಮೇಯರ್ ಹಾಗು ಉಪಮೇಯರ್ ಅವರಿಗೂ ಮನವರಿಕೆ ಮಾಡಿಕೊಟ್ಟಿದ್ದಾರೆ. ಆದರೆ, ಕೆಲವು ದಿನಗಳ ಮಟ್ಟಿಗೆ ಜವಾಬ್ದಾರಿ ನಿಬಾಯಿಸಲೇಬೇಕೆಂದು ಜಿಲ್ಲಾಧಿಕಾರಿ ಹೇಳಿದ್ದರಿಂದ ವಿಧಿ ಇಲ್ಲದೆ ಬುಧವಾರ ಸಂಜೆ ರಮೇಶ್ ಅವರು ಕಚೇರಿಗೆ ಆಗಮಿಸಿದ್ದಾರೆ. ಒಲ್ಲದ ಮನಸ್ಸಿನಿಂದ ರಮೇಶ್ ಅವರು ಹೆಚ್ಚುವರಿ ಹೊಣೆ ಹೊತ್ತಿದ್ದಾರೆಂದು ಪಾಲಿಕೆ ಸದಸ್ಯರು ಅಭಿಪ್ರಾಯಪಟ್ಟರು.

ಪೌರಾಯುಕ್ತ ಆರ್.ಕೃಷ್ಣಮೂರ್ತಿ ಅವರನ್ನು ಏಕಾಏಕಿ ಕಡ್ಡಾಯ ರಜೆ ಮೇಲೆ ಕಳುಹಿಸಿದ್ದು, ಪಾಲಿಕೆ ಇತರ ಅಧಿಕಾರಿ ಹಾಗು ಸಿಬ್ಬಂದಿಯ ಬೇಸರಕ್ಕೆ ಕಾರಣವಾಗಿದೆ. ಪಾಲಿಕೆ ವ್ಯಾಪ್ತಿಯಲ್ಲಿ ಕೆಲಸ ಮಾಡಲು ಕೇವಲ 120 ಪೌರ ಕಾರ್ಮಿಕರಿದ್ದಾರೆ. 35 ವಾರ್ಡ್ ಹಾಗು 37 ಹಳ್ಳಿಗಳಲ್ಲಿ ಸ್ವಚ್ಛತಾ ಕೆಲಸ ಕಡಿಮೆ ಸಂಖ್ಯೆಯ ಕಾರ್ಮಿಕರಿಂದ ಸಾಧ್ಯವಿಲ್ಲ. ಜೊತೆಗೆ ಹುಣಸಿನಕೆರೆ, 80 ಅಡಿ ರಸ್ತೆಯಲ್ಲಿ ಸಾರ್ವಜನಿಕರು ರಸ್ತೆಗೆ ಕಸ ಸುರಿಯುತ್ತಾರೆ. ಜನರು ಮಾಡುವ ತಪ್ಪಿಗೆ ಅಧಿಕಾರಿಗಳನ್ನು ಅಪರಾಧಿ ಸ್ಥಾನದಲ್ಲಿರುವುದು ಯಾವ ನ್ಯಾಯವೆಂದು ಪ್ರಶ್ನಿಸಿದ್ದಾರೆ.

ಹುಣಸಿನಕೆರೆ ಸುಂದರ ಪ್ರವಾಸಿ ತಾಣವಾಗಿದೆ. ಅದಕ್ಕೆ ತಕ್ಕಂತೆ ಸೌಕರ್ಯಗಳನ್ನು ಕಲ್ಪಿಸಿಲ್ಲ. ಕೆರೆ ಸುತ್ತಲೂ ವಾಕಿಂಗ್ ಪಾಥ್ ನಿರ್ಮಿಸಿ ರಾತ್ರಿ ಹೊತ್ತು ಬೆಳಕಿನ ವ್ಯವಸ್ಥೆ ಕಲ್ಪಿಸಿದರೆ ಕಸ ಸುರಿಯುವುದನ್ನು ತಪ್ಪಿಸಬಹುದು. ಜೊತೆಗೆ ಪಾಲಿಕೆಯಿಂದ ರಸ್ತೆ ಬದಿ ಅಳವಡಿಸಿದ್ದ ತಂತಿ ಬೇಲಿಯನ್ನು ಮುರಿದು ಹಾಕಿದ್ದಾರೆ. ಮಾಂಸದ ಅಂಗಡಿ, ವ್ಯಾಪಾರಿಗಳು ರಾತ್ರಿಯಾದರೆ ಲೋಡ್‌ಗಟ್ಟಲೇ ಕಸ ಸುರಿಯುತ್ತಾರೆ. ಅದಕ್ಕೆ ಅಧಿಕಾರಿಗಳನ್ನು ಹೊಣೆಗಾರರನ್ನಾಗಿಸುವುದು ಸರಿಯಾದ ನಡೆಯಲ್ಲ ಎಂಬ ಮಾತುಗಳು ಕೇಳಿಬಂದಿವೆ.

### ಸದಾ ವಿವಾದದಲ್ಲಿ ಪಾಲಿಕೆ

ಮಹಾನಗರ ಪಾಲಿಕೆ ಒಂದಿಲ್ಲೊಂದು ಕಾರಣಗಳಿಂದ ವಿವಾದಗಳಿಂದಲೇ ಸುದ್ದಿಯಲ್ಲಿದೆ. ಹಾಸನಾಂಬ ಜಾತ್ರಾ ಮಹೋತ್ಸವ ಸ್ವಚ್ಛತಾ ಟೆಂಡರ್ ಬಿಲ್ ಮಂಜೂರಿಗೆ ಲಂಚ ಪಡೆಯುತ್ತಿದ್ದಾಗಲೇ ಆಯುಕ್ತ ನರಸಿಂಹ ಮೂರ್ತಿ ಹಾಗು ಸಹಾಯಕ ಕಾರ್ಯಪಾಲಕ ಇಂಜಿನೀ ಯರ್ ಕೆ.ಆರ್. ವೆಂಕಟೇಶ್ ಅವರನ್ನು ಲೋಕಾಯುಕ್ತ ಪೊಲೀಸರು ಜನವರಿ 9ರಂದು ಬಂಧಿಸಿದ್ದರು. ಆ ಬಳಿಕ ಹುಡಾ ಆಯುಕ್ತ ಕೆ.ಎಂ.ರಮೇಶ್ ಅವರಿಗೆ ಹೆಚ್ಚುವರಿ ಹೊಣೆ ನೀಡಲಾಗಿತ್ತು. ನಂತರ ಆರ್.ಕೃಷ್ಣಮೂರ್ತಿ ಅಧಿಕಾರ ವಹಿಸಿಕೊಂಡು ಕೆಲಸ ಮಾಡಿಕೊಂಡಿದ್ದರಾದರೂ ಜಿಲ್ಲಾಧಿಕಾರಿ ಜೊತೆಗಿನ ವರ್ತನೆ ಅವರನ್ನು ಸಂಕಷ್ಟಕ್ಕೆ ಸಿಲುಕಿಸಿದೆ.




### ಪಾಲಿಕೆ ಚುನಾವಣೆ ಅರ್ಜಿ: ನ. 3ಕ್ಕೆ ವಿಚಾರಣೆ ಮುಂದೂಡಿಕೆ

ಹಾಸನ: ಮಹಾನಗರ ಪಾಲಿಕೆ ಚುನಾವಣೆ ಮುಂದೂಡಬೇಕೆಂದು ಸಲ್ಲಿಕೆಯಾಗಿದ್ದ ಅರ್ಜಿ ವಿಚಾರಣೆಯನ್ನು ಹೈಕೋರ್ಟ್ ನ. 3ರ ಸೋಮವಾರಕ್ಕೆ ಮುಂದೂಡಿದೆ.

ಹಾಸನ ಮಹಾನಗರ ಪಾಲಿಕೆ, ಯಾದಗಿರಿ ನಗರಸಭೆ ಸೇರಿ ವಿವಿಧ ಜಿಲ್ಲೆಗಳ ಚುನಾಯಿತ ಪ್ರತಿನಿಧಿಗಳು ತಮ್ಮ ಅಧಿಕಾರಾವಧಿ ಐದು ವರ್ಷ ಪೂರ್ಣಗೊಂಡಿಲ್ಲ. ಕೋವಿಡ್ ಸಮಯದಲ್ಲಿ ಕೆಲಸ ಮಾಡಲು ಅವಕಾಶ ಸಿಕ್ಕಿಲ್ಲ. ಅಧ್ಯಕ್ಷ ಹಾಗು ಉಪಾಧ್ಯಕ್ಷರ ಮೀಸಲಾತಿ ಘೋಷಣೆಯಾಗದೆ ಒಂಬತ್ತು ತಿಂಗಳು ಕಾಲ ಆಡಳಿತಾಧಿಕಾರಿ ಆಡಳಿತವಿತ್ತು. ಹೀಗಾಗಿ ತಮಗೆ ಪೂರ್ಣಾವಧಿಗೆ ಅವಕಾಶ ಮಾಡಿಕೊಡಬೇಕೆಂದು ನ್ಯಾಯಾಲಯದ ಮೆಟ್ಟಿಲೇರಿದ್ದಾರೆ.

# ಮನವಿ ಸ್ವೀಕರಿಸದ ಡಿ.ಸಿ. ವಿರುದ್ಧ ವಕೀಲರ ಆಕ್ರೋಶ

## ಪ್ರತಿಷ್ಠೆಗೆ ಕಾರಣವಾದ ಪ್ರತಿಭಟನೆ | ಜಿಲ್ಲಾಧಿಕಾರಿ ಕಚೇರಿ ಎದುರು ರಸ್ತೆ ತಡೆ | ವಾಹನ ಸಂಚಾರಕ್ಕೆ ಅಡ್ಡಿ

• ಪ್ರಜೋದಯ ವರದಿ

**ಹಾಸನ:** ಉರಿಲಿಂಗ ಪೆದ್ದಿಮಠದ ಜ್ಞಾನಪ್ರಕಾಶ ಸ್ವಾಮೀಜಿ ವಿರುದ್ಧ ಪ್ರತಿಭಟನೆ ನಡೆಸಲು ಆಗಮಿಸಿದ್ದ ವಕೀಲರ ಮನವಿಯನ್ನು ಜಿಲ್ಲಾಧಿಕಾರಿ ಸ್ವೀಕರಿಸಲು ಆಗಮಿಸಲಿಲ್ಲವೆಂದು ಜಿಲ್ಲಾಧಿಕಾರಿ ಕಚೇರಿ ಎದುರು ಬಿ.ಎಂ.ರಸ್ತೆಯಲ್ಲಿ ವಾಹನ ಸಂಚಾರ ತಡೆದು ವಕೀಲರು ಆಕ್ರೋಶ ವ್ಯಕ್ತಪಡಿಸಿದರು.

ಸ್ವಾಮೀಜಿ ಸರ್ವೋಚ್ಚ ನ್ಯಾಯಾಲಯ ಮತ್ತು ಕರ್ನಾಟಕ ಹೈಕೋರ್ಟ್‌ನ ನ್ಯಾಯಾಧೀಶರು ಸೇರಿ ನ್ಯಾಯಾಂಗದ ಬಗ್ಗೆ ಅವಹೇಳನಕಾರಿ ಹೇಳಿಕೆ ನೀಡಿರುವುದನ್ನು ಖಂಡಿಸಿ ವಕೀಲರ ಸಂಘ ಜಿಲ್ಲಾ ನ್ಯಾಯಾಲಯದಿಂದ ಮೆರವಣಿಗೆ ಮೂಲಕ ಜಿಲ್ಲಾಧಿಕಾರಿ ಕಚೇರಿಗೆ ಆಗಮಿಸಿದ್ದರು. ಈ ಸಮಯದಲ್ಲಿ ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಅವರು ಅಧಿಕಾರಿಗಳೊಂದಿಗೆ ಸಭೆ ನಡೆಸುತ್ತಿದ್ದ ಕಾರಣ ಮನವಿ ಸ್ವೀಕರಿಸಲು ಆಗಮಿಸಲಿಲ್ಲ. ಅವರ ಪರವಾಗಿ ಅಪರ ಜಿಲ್ಲಾಧಿಕಾರಿ ಮಂಜುನಾಥ ಅವರು ಮನವಿ ಸ್ವೀಕರಿಸಲು ಮುಂದಾದರು. ಈ ವೇಳೆ ಪ್ರತಿಭಟನಾಕಾರರು ಜಿಲ್ಲಾಧಿಕಾರಿಗಳೇ ಸ್ವತಃ ಆಗಮಿಸಿ ಮನವಿ ಸ್ವೀಕರಿಸಬೇಕೆಂದು ಆಗ್ರಹಿಸಿದರು.



ಒಂದು ಗಂಟೆಗೂ ಹೆಚ್ಚು ಕಾಲ ಕಚೇರಿ ಎದುರು ಕಾದು ಕುಳಿತರೂ ಮನವಿ ಸ್ವೀಕರಿಸಲು ಆಗಮಿಸದ ಹಿನ್ನಲೆ ವಕೀಲರು ಆಕ್ರೋಶಗೊಂಡು ಬಿ.ಎಂ.ರಸ್ತೆಯಲ್ಲಿ ವಾಹನ ಸಂಚಾರ ತಡೆದು ಘೋಷಣೆಗಳನ್ನು ಕೂಗಿದರು. ಈ ವೇಳೆ ಸ್ಥಳದಲ್ಲಿ ಉದ್ವಿಗ್ನ ವಾತಾವರಣ ನಿರ್ಮಾಣವಾಯಿತು.

ಸಭೆ ಮುಗಿಸಿಕೊಂಡು ಕೆಲಸದ ನಿಮಿತ್ತ ಜಿಲ್ಲಾಧಿಕಾರಿ ಕಚೇರಿಯಿಂದ ಹೊರಟ ಜಿಲ್ಲಾ ಕಾರ್ಮಿಕ ಅಧಿಕಾರಿ ಯಮುನಾ ಅವರ ಕಾರು ತಡೆದು ವಕೀಲರು ವಾಗ್ವಾದ ನಡೆಸಿದರು. ಪರಿಣಾಮವಾಗಿ ಕೆಲ ಹೊತ್ತು ವಾಹನ ಸಂಚಾರ ಸಂಪೂರ್ಣ ಸ್ಥಗಿತಗೊಂಡಿತು. ತಕ್ಷಣ ಸ್ಥಳಕ್ಕೆ ಬಂದ ಪೊಲೀಸರು ಪ್ರತಿಭಟನಾಕಾರರನ್ನು ಮನವೊಲಿಸಲು ಪ್ರಯತ್ನಿಸಿದರೂ, ವಕೀಲರು ಜಿಲ್ಲಾಧಿಕಾರಿ ಕ್ಷಮೆ ಕೇಳಬೇಕು ಮತ್ತು ಸ್ವತಃ ಮನವಿ ಸ್ವೀಕರಿಸಬೇಕೆಂದು ಆಗ್ರಹಿಸಿದರು.

ಜಿಲ್ಲಾಧಿಕಾರಿ ಕಚೇರಿಯಲ್ಲಿದ್ದರೂ ಮನವಿ ಸ್ವೀಕರಿಸಲು ಬಂದಿಲ್ಲ. ಇದು ವಕೀಲರ ಗೌರವಕ್ಕೆ ಧಕ್ಕೆ ತಂದಿದೆ. ಗುರುವಾರ ಜಿಲ್ಲೆಯಾದ್ಯಂತ ವಕೀಲರು ಕಲಾಪದಿಂದ ಹೊರಗುಳಿದು, ನಗರದ ಎನ್.ಆರ್.ವೃತ್ತದಲ್ಲಿ ಬೃಹತ್ ಪ್ರತಿಭಟನೆ ನಡೆಸುತ್ತೇವೆ.

- ಮೊಗಣ್ಣಗೌಡ, ವಕೀಲರ ಸಂಘದ ಜಿಲ್ಲಾಧ್ಯಕ್ಷ

ಕೊನೆಗೂ ಜಿಲ್ಲಾಧಿಕಾರಿ ಆಗಮಿಸದ ಹಿನ್ನಲೆಯಲ್ಲಿ ವಕೀಲರ ಸಂಘದ ಸದಸ್ಯರು ಸಭೆ ನಡೆಸಿ, ಪ್ರತಿಭಟನೆ ತಾತ್ಕಾಲಿಕವಾಗಿ ಹಿಂಪಡೆದು ಗುರುವಾರ ದೊಡ್ಡಮಟ್ಟದಲ್ಲಿ ನಡೆಸಲು ತೀರ್ಮಾನಿಸಿ ವಾಪಾಸ್ಸಾದರು.

ವಕೀಲರ ಸಂಘದ ಜಿಲ್ಲಾಧ್ಯಕ್ಷ ಮೊಗಣ್ಣಗೌಡ ಮಾತನಾಡಿ, ನಾವು ಜ್ಞಾನಪ್ರಕಾಶ ಸ್ವಾಮೀಜಿ ಅವರ ಅವಹೇಳನಕಾರಿ ಹೇಳಿಕೆಗೆ ವಿರೋಧ

» ನಾಲ್ಕನೇ ಪುಟದಲ್ಲಿ

# ಅಧಿಕಾರಿಗಳ ಗೈರು: ಯಸಳೂರು ಗ್ರಾಮಸಭೆ ಬಹಿಷ್ಕಾರ

• ಪ್ರಜೋದಯ ವರದಿ

**ಸಕಲೇಶಪುರ:** ಗ್ರಾಮಸ್ಥರ ಕುಂದು ಕೊರತೆ ಆಲಿಸುವ ಉದ್ದೇಶದಿಂದ ಹಮ್ಮಿಕೊಂಡಿದ್ದ ಗ್ರಾಮಸಭೆಗೆ ಅಧಿಕಾರಿಗಳು ಗೈರಾದ್ದರಿಂದ ಸಭೆ ಬಹಿಷ್ಕರಿಸಿದ ಘಟನೆ ತಾಲ್ಲೂಕಿನ ಯಸಳೂರು ಗ್ರಾಮ ಪಂಚಾಯಿತಿಯಲ್ಲಿ ಬುಧವಾರ ನಡೆದಿದೆ.

ಕೇವಲ ನಾಲ್ಕು ಇಲಾಖೆಗಳ ಅಧಿಕಾರಿಗಳು ಮಾತ್ರ ಹಾಜರಾಗಿ ದ್ದರು. ಉಳಿದ ಇಲಾಖೆಯ ಯಾರೂ ಬಾರದ ಹಿನ್ನಲೆಯಲ್ಲಿ ಸದಸ್ಯರು ಹಾಗು ಸಾರ್ವಜನಿಕರು ಗ್ರಾಮ ಪಂಚಾಯಿತಿ ಕಚೇರಿಗೆ ಬೀಗ ಹಾಕಿ ಪ್ರತಿಭಟಿಸಿದರು.

ನಮ್ಮ ಸಮಸ್ಯೆ ಯಾರಿಗೆ ಹೇಳುವುದು. ಯಾರಿಂದ ಮಾಹಿತಿ ಪಡೆಯುವುದೆಂದು ನಾಗರಿಕರು ಪ್ರಶ್ನಿಸಿದರು. ರೈತರಿಗೆ ಸರ್ಕಾರದಿಂದ ದೊರೆಯುವ ಯೋಜನೆಗಳ ಕುರಿತು ಮಾಹಿತಿ ಪಡೆಯಲು ಗ್ರಾಮಸಭೆ ಒಳ್ಳೆಯ ವೇದಿಕೆಯಾಗಿದೆ. ಅದಕ್ಕಾಗಿ ಕೆಲಸ ಬಿಟ್ಟು ಬಂದಿದ್ದೇವೆ. ಅಧಿಕಾರಿಗಳೇ ಗೈರಾಗಿರುವುದು ಯಾವ ನ್ಯಾಯವೆಂದು ಪ್ರಶ್ನಿಸಿದರು.




ಗ್ರಾಮ ಪಂಚಾಯಿತಿ ಸದಸ್ಯೆ ಪವಿತ್ರಾ ಅವರು ಮಾತನಾಡಿ, ಗ್ರಾಮದಲ್ಲಿ ಅನೇಕ ಸಮಸ್ಯೆಗಳಿವೆ. ಮುಂದಿನ ದಿನಗಳಲ್ಲಿ ಶಾಸಕರ ಸಮ್ಮುಖದಲ್ಲಿ ತಾಲ್ಲೂಕು ಮಟ್ಟದ ಅಧಿಕಾರಿಗಳನ್ನು ಕರೆಸಿ ಸಭೆ ಮಾಡಬೇಕು. ಆ ಬಳಿಕವಷ್ಟೇ ಗ್ರಾಮ ಸಭೆಗೆ ಅವಕಾಶ ಕಲ್ಪಿಸಲಾಗುವುದೆಂದರು.

ಗಾಮಸ್ಥ ಸಂಗಮೇಶ್ ಅವರು ಮಾತನಾಡಿ, ಸಭೆ ಕುರಿತು 57 ಇಲಾಖೆಗೆ ಮಾಹಿತಿ ನೀಡಲಾಗಿದ್ದರೂ ಕೇವಲ 4 ಇಲಾಖೆಯವರು ಮಾತ್ರ ಹಾಜರಾಗಿದ್ದಾರೆ. ಅಧಿಕಾರಿಗಳ ನಿರ್ಲಕ್ಷ್ಯದಿಂದ ಸಾರ್ವಜನಿಕರು ತೊಂದರೆ ಅನುಭವಿಸುವಂತಾಗಿದೆ. ಮೇಲಾಧಿಕಾರಿಗಳು ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಬೇಕೆಂದು ಒತ್ತಾಯಿಸಿದರು.

# ಚಿನ್ನಾಭರಣ ಕಳವು

• ಪ್ರಜೋದಯ ವರದಿ

**ಅರಸೀಕೆರೆ:** ಮನೆ ಮುಂಬಾಗಿಲ ಕಿಟಕಿ ಸಹಾಯದಿಂದ ಬಾಗಿಲು ತೆರೆದು ಒಳನುಗ್ಗಿರುವ ಕಳ್ಳರು 9.67 ಲಕ್ಷ ರೂ. ಮೌಲ್ಯದ ಚಿನ್ನಾಭರಣ ಕದ್ದಿರುವ ಘಟನೆ ನಗರದ ಹೆಜ್ಜಗೊಂಡನಹಳ್ಳಿ ಬಡಾವಣೆಯಲ್ಲಿ ನಡೆದಿದೆ.

ಸುರೇಶ್ ಅವರು ಅ. 28ರಂದು ಪುತ್ರನನ್ನು ಕೊಡಗು ಜಿಲ್ಲೆಯ ಕೂಡಿಗೆಯ ಸೈನಿಕ ಶಾಲೆಗೆ ಬಿಟ್ಟು ಬರಲು ಮನೆಗೆ ಬೀಗ ಹಾಕಿ ತೆರಳಿದ್ದರು. ಸಂಜೆ ವಾಪಾಸ್ ಬಂದು ನೋಡಿದಾಗ ಕಳ್ಳತನವಾಗಿರುವುದು ತಿಳಿದಿದೆ. ಬೀರುವಿನಲ್ಲಿದ್ದ 191 ಗ್ರಾಂ ತೂಕದ ಚಿನ್ನಾಭರಣ, 120 ಗ್ರಾಂನ ಬೆಳ್ಳಿ , 60 ಸಾವಿರ ರೂ. ಕದ್ದಿದ್ದಾರೆ. ನಗರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಪಕ್ಷಾತೀತವಾಗಿ ಸರ್ವಾನುಮತದ ಒಪ್ಪಿಗೆ: ಶಾಸಕ ಶಿವಲಿಂಗೇಗೌಡ ಪ್ರಶಂಸೆ

# ಹಲವು ಅಭಿವೃದ್ಧಿ ಕಾಮಗಾರಿ ಟೆಂಡರ್‌ಗೆ ಅನುಮೋದನೆ

• ಪ್ರಜೋದಯ ವರದಿ

**ಅರಸೀಕೆರೆ:** ಕೋಟ್ಯಾಂತರ ರೂ. ಮೊತ್ತದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ನಗರಸಭೆ ಸಾಮಾನ್ಯ ಸಭೆಯಲ್ಲಿ ಸರ್ವಾನುಮತದಿಂದ ಒಪ್ಪಿಗೆ ಪಡೆಯಲಾಯಿತು.

ಶಾಸಕ ಕೆ.ಎಂ.ಶಿವಲಿಂಗೇಗೌಡ ಅವರು ಮಾತನಾಡಿ, ಸಭೆಯಲ್ಲಿ ಸರ್ವ ಸದಸ್ಯರು ಒಮ್ಮತದಿಂದ ಪಕ್ಷಾತೀತವಾಗಿ ಅಭಿವೃದ್ಧಿ ಕಾರ್ಯಗಳಿಗೆ ಅನುಮೋದನೆ ನೀಡಿರುವುದರಿಂದ ಮುಂದಿನ ದಿನಗಳಲ್ಲಿ ಉತ್ತಮ ಕೆಲಸ ಮಾಡಲು ಇನ್ನಷ್ಟು ಉತ್ತೇಜನ ನೀಡಲಿದೆ. ಇಂದಿನ ಸಭೆಯಲ್ಲಿ 17 ರಿಂದ 18 ಕೋ.ರೂ. ಕಾಮಗಾರಿಗಳ ಟೆಂಡರ್ ಅನುಮೋದನೆ ನೀಡಿರುವುದು ಸಭೆಯ ಹೆಗ್ಗಳಿಕೆಯಾಗಿದೆ. ಎಲ್ಲರೂ ಆತ್ಮಸ್ಥೈರ್ಯದಿಂದ ನಿಮ್ಮ ನಿಮ್ಮ ವಾರ್ಡ್‌ಗಳ ಅಭಿವೃದ್ಧಿ ಬಗ್ಗೆ ಹೆಮ್ಮೆಯಿಂದ ಸಮರ್ಥಿಸಿಕೊಳ್ಳಿ ಎಂದು ಹೇಳಿದರು.

ಅರಸೀಕೆರೆ ನಗರಸಭೆ ಉತ್ತಮವಾಗಿ ಕಾರ್ಯ ನಿರ್ವಹಿಸುತ್ತಿರುವ ಬಗ್ಗೆ ಪ್ರಶಂಸೆ ವ್ಯಕ್ತವಾಗುತ್ತಿದೆ. ಪೌರ ಕಾರ್ಮಿಕರ ಶ್ರಮದೊಂದಿಗೆ ತ್ಯಾಜ್ಯ ವಿಲೇವಾರಿ ಸಮರ್ಪಕವಾಗಿ ನಿರ್ವಹಣೆಯಾಗುತ್ತಿದೆ. ನಗರೋತ್ಥಾನ ಯೋಜನೆಯ ಮೂಲಕ ಗುಣಮಟ್ಟದ ಕಾಮಗಾರಿಗಳು ಅನುಷ್ಠಾನವಾಗಿವೆ. ಮುಂದಿನ ದಿನಗಳಲ್ಲಿ 45 ಕೋ. ರೂ. ವಿಶೇಷ ಅನುದಾನ ಬಿಡುಗಡೆ ಮಾಡಸಲಿದ್ದೇನೆ. ನಗರದಲ್ಲಿ ಒಳಾಂಗಣ ಕ್ರೀಡಾಂಗಣ 7 ಕೋ. ರೂ. ವೆಚ್ಚದಲ್ಲಿ ನಿರ್ಮಾಣ ಆಗಲಿದೆ ಎಂದು ತಿಳಿಸಿದರು.



ಸದಸ್ಯ ವೆಂಕಟಮುನಿ ಮಾತನಾಡಿ, ನಗರಸಭಾ ಅನುದಾನ, ಐಡಿಎಸ್ ಎಂಟಿ ಅನುದಾನ, 15ನೇ ಹಣಕಾಸು ಅನುದಾನ ಮತ್ತು ಎಸ್‌ಎಫ್‌ಸಿ ಅನುದಾನದಲ್ಲಿ ನಡೆಯುತ್ತಿರುವ ಕಾಮಗಾರಿಗಳಲ್ಲಿ ಗುತ್ತಿಗೆದಾರರಾದ ಯಾದಗಿರಿಯ ಶಂಕರ್ ಚೌಹಾಣ್, ಪರಪ್ಪ ಚೌಹಾಣ್, ಶಿವಮೊಗ್ಗದ ವಿಠಲ್ ಚೌಹಾಣ್ ಇವರೇ ಗುತ್ತಿಗೆ ಮಾಡುತ್ತಿರುವ ಬಗ್ಗೆ ಅನುಮಾನವಿದ್ದು, ಈ ಗುತ್ತಿಗೆದಾರರನ್ನು ಸಭೆ ಕರೆಯಿಸಬೇಕೆಂದು ಆಗ್ರಹಿಸಿದರು.

ಮಧ್ಯಪ್ರವೇಶ ಮಾಡಿದ ಕೆ.ಎಂ.ಶಿವಲಿಂಗೇಗೌಡ ಅವರು ಮಾತನಾಡಿ, ಶಂಕರ್ ಚೌಹಾಣ್, ವಿಠಲ್ ಚೌಹಾಣ್ ಮತ್ತು ಶಂಕರ್ ಚೌಹಾಣ್ ಇವರು ಕಡಿಮೆ ದರದ ಮೂಲಕ ಒಪ್ಪಿಕೊಂಡಿರುವ ಇವರ ಕಾಮಗಾರಿಗಳ ಗುಣಮಟ್ಟ ಕೂಡ ಸದಸ್ಯರು ಅವಲೋಕಿಸಬೇಕು. ಎಲ್ಲಾ ಕಾಮಗಾರಿಗಳ ನಿರ್ವಹಣೆಯಲ್ಲಿ ಇವರ ಪಾತ್ರವನ್ನು ಪ್ರಶ್ನಿಸುತ್ತಿರುವುದು ಸ್ವಾಗತಾರ್ಹವಾಗಿದೆ ಎಂದರು.

ಐಡಿಎಸ್‌ಎಂಟಿ ಅನುದಾನದಡಿಯಲ್ಲಿ ವಿಷಯ 1ರ ನಗರಸಭಾ ವ್ಯಾಪ್ತಿ ಸಂತೆ ಮೈದಾನದಲ್ಲಿ ಹೊಸದಾಗಿ ವಾಣಿಜ್ಯ ಸಂಕೀರ್ಣ ನಿರ್ಮಾಣ ಮಾಡುವ ವಿಚಾರವನ್ನು ಪ್ರಸ್ತಾಪಿಸಿದ ಸಂದರ್ಭ ಮಧ್ಯೆ ಪ್ರವೇಶ ಮಾಡಿದ ಶಾಸಕರು, ಬಿ.ಹೆಚ್.ರಸ್ತೆಯಲ್ಲಿರುವ ಹಳೇ ತರಕಾರಿ ಮಾರುಕಟ್ಟೆ ಪ್ರದೇಶದಿಂದ ಸಂತೆ ಮೈದಾನ ವಾಣಿಜ್ಯ ಸಂಕೀರ್ಣಕ್ಕೆ ಸ್ಥಳಾಂತರಿಸಿ ಫುಡ್ ಕೋರ್ಟ್ ನಿರ್ಮಾಣ ಮಾಡಲು ನಗರಸಭೆ ಕಾರ್ಯೋನ್ಮುಖವಾಗಬೇಕು. ಇದರಿಂದ ಬೀದಿ ಆಹಾರ ಮಾರಾಟಗಾರರಿಗೆ ಶಾಶ್ವತ ನೆಲೆ ಸಿಗಲು ಸಾಧ್ಯವಾಗುತ್ತದೆ ಎಂದು ಸಲಹೆ ನೀಡಿದರು.

ವಿವಿಧ ಕಾಮಗಾರಿಗಳ ಗುತ್ತಿಗೆದಾರರನ್ನು ಅನುಮೋದನೆಯೊಂದಿಗೆ ಮಾರ್ಚ್-2025 ರಿಂದ ಅಕ್ಟೋಬರ್ 2025 ರವರೆಗೆ ಮಾಹೆಯಾನದ ಒಟ್ಟು 12,16,09,894 ರೂ. ಜಮಾದೊಂದಿಗೆ 6,92,31,913 ರೂ. ವೆಚ್ಚದ ಬಗ್ಗೆ ಸಭೆಯಲ್ಲಿ ಮಂಡಿಸಿ ವಿವಿಧ ವಿಷಯಗಳನ್ನು ಅನುಮೋದನೆ ಪಡೆಯಲಾಯಿತು.

ನಗರಸಭೆ ಅಧ್ಯಕ್ಷ ಎಂ.ಸಮೀವುಲ್ಲಾ, ಉಪಾಧ್ಯಕ್ಷ ಮನೋಹರ್ ಮೇಸ್ತ್ರಿ, ಸದಸ್ಯರಾದ ಮೇಲುಗಿರೀಗೌಡ, ಜಿ.ಟಿ ಗಣೇಶ್, ಯುವರಾಜ್, ಅನ್ನಪೂರ್ಣ, ಶ್ವೇತ ರಮೇಶ್, ಪ್ರೇಮ, ಸುಜಾತ ರಮೇಶ್ ನಾಯ್ಡು, ಮಧುರಾ ಹರೀಶ್, ಇಮ್ರಾನ್, ದರ್ಶನ್, ಭಾಸ್ಕರ್, ಪೌರಾಯುಕ್ತ ಕೃಷ್ಣಮೂರ್ತಿ, ವ್ಯವಸ್ಥಾಪಕಿ ಕಲಾವತಿ, ಸುನೀಲ್, ಜಗದೀಶ್, ರಾಜಸ್ವ ನಿರೀಕ್ಷಕ ಮಂಜುನಾಥ್ ಇದ್ದರು.

### ಜನನ-ಮರಣ ಪ್ರಮಾಣ ಸಮ : ಕಳವಳ

ನಗರದಲ್ಲಿ ಜನನ ಮತ್ತು ಮರಣ ಸಂಖ್ಯೆ ಸರಿಸಮಾನವಾಗಿ ಇದೆ. ಇದು ಆತಂಕಕಾರಿ ಬೆಳವಣಿಗೆ. ನಗರಸಭೆ ಅಧ್ಯಕ್ಷರು ಮತ್ತು ಆಯುಕ್ತರು ರಾಜ್ಯದ ವಿವಿಧೆಡೆ ಇರುವ ನಗರಸಭೆ ವ್ಯಾಪ್ತಿಯ ಜನನ ಮತ್ತು ಮರಣ ವರದಿ ಅವಲೋಕಿಸಬೇಕು. ಮರಣ ಸಂಖ್ಯೆ ಏರುಪೇರಾದರೂ ಜನನ ಸಂಖ್ಯೆ ಸರಿ ಸಮನಾಗಿರುವುದು ಗಂಭೀರವಾಗಿ ಚರ್ಚಿಸಬೇಕಿದೆ ಎಂದು ಕೆ.ಎಂ.ಶಿವಲಿಂಗೇಗೌಡ ಅವರು ಕಳವಳ ವ್ಯಕ್ತಪಡಿಸಿದರು.

# 50 ಲಕ್ಷ ರೂ. ವೆಚ್ಚದ ವಿವಿಧ ಕಾಮಗಾರಿಗೆ ಭೂಮಿಪೂಜೆ

• ಪ್ರಜೋದಯ ವರದಿ

**ಹಾಸನ:** ಸಂಸದ ಶ್ರೇಯಸ್ ಪಟೇಲ್ ಅವರು ಬುಧವಾರ ಹೊಳೆನರಸೀಪುರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ವಿವಿಧ ಗ್ರಾಮಗಳಲ್ಲಿ ಸಂಸದರ ಸ್ಥಳೀಯ ಕ್ಷೇತ್ರಾಭಿವೃದ್ಧಿ ಅನುದಾನದಡಿ ಸುಮಾರು 50 ಲಕ್ಷ ರೂ. ವೆಚ್ಚದ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿದರು.

ಐಚನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಚಿಟ್ಟನಹಳ್ಳಿ ಗ್ರಾಮದಲ್ಲಿ ಶುದ್ಧ ಕುಡಿಯುವ ನೀರಿನ ಘಟಕ (ಯಂತ್ರೋಪಕರಣ)ಕ್ಕೆ ಅಳವಡಿಸುವ ಕಾಮಗಾರಿ, ಲಕ್ಷ್ಮೀಪುರದಲ್ಲಿ ಬಸ್ ನಿಲ್ದಾಣ, ಪಡುವಲಹಿಪ್ಪೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಮಾರಗೌಡನಹಳ್ಳಿ ಗ್ರಾಮದಲ್ಲಿ ಬಸ್ ನಿಲ್ದಾಣ ನಿರ್ಮಾಣ, ಬಿಲ್ಲೇನಹಳ್ಳಿಯಲ್ಲಿ ರಸ್ತೆ ಅಭಿವೃದ್ಧಿ ಹಾಗು ಚಿಗಳ್ಳಿಯಲ್ಲಿ ಸಮುದಾಯ ಭವನ ನಿರ್ಮಾಣ ಕಾಮಗಾರಿ ಹಾಗು ಲಕ್ಕೂರು ಗ್ರಾಮದಲ್ಲಿ ಶುದ್ಧ ಕುಡಿಯುವ ನೀರಿನ ಘಟಕ ನಿರ್ಮಾಣಕ್ಕೆ ಪೂಜೆ ಸಲ್ಲಿಸಿದರು.

ಸಂಸದ ಶ್ರೇಯಸ್ ಪಟೇಲ್ ಅವರು ಮಾತನಾಡಿ, ಸಂಸದರ ಸ್ಥಳೀಯ ಅಭಿವೃದ್ಧಿ ಅನುದಾನದಡಿ ಗ್ರಾಮೀಣ ಪ್ರದೇಶಗಳಿಗೆ ಸೌಕರ್ಯ ಕಲ್ಪಿಸಲು ಕ್ರಮ ವಹಿಸಲಾಗಿದೆ.



ಕ್ಷೇತ್ರದ ಜನರ ಋಣ ನನ್ನ ಮೇಲಿದೆ. ನಮ್ಮ ಕುಟುಂಬ ಹಾಗು ನನ್ನ ಮೇಲೆ ವಿಶ್ವಾಸವಿಟ್ಟು ಮತ ನೀಡಿ ಗೆಲ್ಲಿಸಿದ್ದಾರೆ. ಚುನಾವಣೆ ಪೂರ್ವದಲ್ಲಿ ಕೊಟ್ಟಂತಹ ಭರವಸೆಗಳನ್ನು ಈಡೇರಿಸುವುದು ನನ್ನ ಜವಾಬ್ದಾರಿ. ಆದ್ದರಿಂದ ಹಂತ ಹಂತವಾಗಿ ಕಾಮಗಾರಿ ಕೈಗೊಳ್ಳಲಾಗುತ್ತಿದೆ. ಗುಣಮಟ್ಟದ ಕಾಮಗಾರಿಗೆ ಆದ್ಯತೆ ನೀಡುವಂತೆ ಅಧಿಕಾರಿ ಹಾಗು ಗುತ್ತಿಗೆದಾರರಿಗೆ ಸೂಚಿಸಿದ್ದೇನೆಂದರು.

ಕಾಂಗ್ರೆಸ್ ನೇತೃತ್ವದ ರಾಜ್ಯ ಸರ್ಕಾರ ರಾಜ್ಯದಲ್ಲಿ ಅಸ್ತಿತ್ವಕ್ಕೆ ಬಂದ ತಕ್ಷಣ ವರ್ಷಕ್ಕೆ 56,000 ಕೋ. ರೂ. ವೆಚ್ಚ ಮಾಡಿ ಕೋಟ್ಯಾಂತರ ಕುಟುಂಬಗಳಿಗೆ ಅನುಕೂಲವಾಗುವಂತೆ ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಲಾಗಿದೆ ಎಂದರು.

ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಆದರ್ಶ ಮತ್ತು ತತ್ವಗಳನ್ನು ಕಡ್ಡಾಯವಾಗಿ ಪಾಲಿಸುವುದರ ಮೂಲಕ ಸಂವಿಧಾನದ ಆಶಯವನ್ನು ಯಥಾವತ್ತಾಗಿ ಜಾರಿಗೊಳಿಸುವ ವಿಷಯದಲ್ಲಿ ಎಲ್ಲರ ಆಲೋಚನೆ ಸಕಾರಾತ್ಮಕವಾಗಿ ಸಾಗಬೇಕು. ಸಂವಿಧಾನದ ಮಹತ್ವ ಮತ್ತು ಪೀಠಿಕೆಯ ಸಾರವನ್ನು ಸೂಕ್ಷ್ಮವಾಗಿ ಅರ್ಥ ಮಾಡಿಕೊಳ್ಳುವುದರ ಮೂಲಕ ತಮ್ಮ ಬದುಕನ್ನು ಮಾದರಿಯಾಗಿ ರೂಪಿಸಿಕೊಳ್ಳಬೇಕೆಂದರು.

ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಹೆಚ್.ಟಿ. ಲಕ್ಷ್ಮಣ್, ಪುರಸಭೆ ಮಾಜಿ ಅಧ್ಯಕ್ಷ ಹೆಚ್.ವಿ.ಪುಟ್ಟರಾಜು, ಅಭಿಯಂತರರಾದ ಪ್ರಶಾಂತ್ ಇದ್ದರು.

ಪರಿಶಿಷ್ಟ ಜಾತಿ ಉಪ ಯೋಜನೆ, ಗಿರಿಜನ ಉಪ ಯೋಜನೆಯಡಿ ಸಾಧಿಸಿರುವ ಪ್ರಗತಿ ಪರಿಶೀಲನಾ ಸಭೆಯಲ್ಲಿ ಡಿ.ಸಿ.

# ಶೇ.100ರಷ್ಟು ಗುರಿ ಸಾಧಿಸಲು ಸೂಚನೆ

• ಪ್ರಜೋದಯ ವರದಿ

**ಹಾಸನ:** ಪರಿಶಿಷ್ಟ ಜಾತಿ ಉಪ ಯೋಜನೆ ಮತ್ತು ಗಿರಿಜನ ಉಪ ಯೋಜನೆಯಡಿ ಶೇಕಡ ನೂರರಷ್ಟು ಗುರಿ ಸಾಧಿಸಲು ಜಿಲ್ಲಾಧಿಕಾರಿ ಲತಾಕುಮಾರಿ ಅವರು ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಬುಧವಾರ ನಡೆದ ಪರಿಶಿಷ್ಟ ಜಾತಿ ಉಪ ಯೋಜನೆ ಮತ್ತು ಗಿರಿಜನ ಉಪ ಯೋಜನೆಯಡಿ ವಿವಿಧ ಇಲಾಖೆಗಳು ಸಾಧಿಸಿರುವ ಪ್ರಗತಿ ಪರಿಶೀಲನಾ ಸಭೆ ನಡೆಸಿ ಮಾತನಾಡಿದ ಅವರು, ಯಾವುದೇ ಇಲಾಖೆಯಿಂದ ಅನುದಾನ ಪೂರ್ಣ ಪ್ರಮಾಣದಲ್ಲಿ ವೆಚ್ಚವಾಗದೆ ವಾಪಸ್ಸು ಹೋಗಬಾರದು. ಈ ನಿಟ್ಟಿನಲ್ಲಿ ಅಧಿಕಾರಿಗಳು ನಿಗಾ ವಹಿಸಬೇಕು ಎಂದರಲ್ಲದೆ, ಅನುದಾನ ವಾಪಸ್ಸು ಹೋದರೆ ನಿಯಮಾನುಸಾರ ಕ್ರಮಕೈಗೊಳ್ಳಲಾಗುವುದು ಎಂದು ತಿಳಿಸಿದರು.




ಪಿ.ಎಂ.ಕೆ.ಎಸ್.ವೈ. ಮುಖ್ಯಮಂತ್ರಿಗಳ ಸೂಕ್ಷ್ಮ ನೀರಾವರಿ ಯೋಜನೆಯಡಿ ಕೃಷಿ ಪರಿಕರಗಳನ್ನು ಅಹ ಫಲಾನುಭವಿಗಳಿಗೆ ವಿತರಣೆ, ಬಿತ್ತನೆ ಬೀಜ ಮಾಡಲು ಕ್ರಮ ವಹಿಸುವುದರ ಜೊತೆಗೆ ಮಣ್ಣಿನ ಫಲವತ್ತತೆ ಪರೀಕ್ಷೆಗೂ ಒತ್ತು ನೀಡು ವಂತೆ ಕೃಷಿ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಪರಿಶಿಷ್ಟ ಜಾತಿ ರೈತರಿಗೆ ಹೆಚ್ಚಿನ ಪ್ರೋತ್ಸಾಹ ನೀಡಿ ತೋಟಗಾರಿಕೆ ಬೆಳೆಗಳನ್ನು ಬೆಳೆಯಲು ಉತ್ತೇಜನ ನೀಡಬೇಕು. ಸಣ್ಣ ನೀರಾವರಿ ಇಲಾಖೆ ಹಾಗೂ ಚೆಸ್ಕಾಂ ಅಧಿಕಾರಿಗಳು ಸಮನ್ವಯತೆಯಿಂದ ಕರ್ತವ್ಯ ನಿರ್ವಹಿಸುವುದರ ಮೂಲಕ ಈಗಾಗಲೇ ಕೊರೆದಿರುವ ಕೊಳವೆ ಬಾವಿಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು. ಬಾಲ ಕಾರ್ಮಿಕರಿಗೆ ಪುನರ್ವಸತಿ ಕಲ್ಪಿಸಲು ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದರಲ್ಲದೆ, ವೈದ್ಯಕೀಯ ಶಿಕ್ಷಣ ಇಲಾಖೆಯಲ್ಲಿ ಎಲ್ಲಾ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ರೋಗಿಗಳಿಗೆ ಉಚಿತ ಚಿಕಿತ್ಸೆ ನೀಡಲು ಕ್ರಮ ಹಾಗೂ ವೈದ್ಯಕೀಯ ವಿದ್ಯಾರ್ಥಿಗಳಿಗೆ ವೈದ್ಯಕೀಯ ಪರಿಕರಗಳ ವಿತರಣೆಗೆ ಕ್ರಮ ವಹಿಸುವಂತೆ ಅಧಿಕಾರಿಗಳಿಗೆ ನಿರ್ದೇಶಿಸಿದರು.

ವಿಕಲಚೇತನರಿಗೆ ಸಾಧನ ಸಲಕರಣೆ ಮತ್ತು ಶೇಕಡ ನೂರರಷ್ಟು ಯು.ಡಿ.ಐ.ಡಿ. ವಿತರಣೆಗೆ ಕ್ರಮ ವಹಿಸಬೇಕು. ಪೂರಕ ಆಹಾರ ಕಾರ್ಯಕ್ರಮದಡಿಯಲ್ಲಿ ಪೌಷ್ಟಿಕ ಆಹಾರ ಒದಗಿಸುವಂತೆ ತಿಳಿಸಿದರಲ್ಲದೆ, ಅಂಗನವಾಡಿ ಕಾರ್ಯಕರ್ತೆಯರಿಗೆ ಸಂಬಂಧಿಸಿದಂತೆ ದೂರುಗಳು ಬಂದಿದ್ದಲ್ಲಿ ಕ್ರಮ ವಹಿಸಲು ಸೂಚಿಸಿದರು.

ಅಪರ ಜಿಲ್ಲಾಧಿಕಾರಿ ಮಂಜುನಾಥ್, ಜಿಲ್ಲಾ ಪಂಚಾಯಿತಿ ಯೋಜನಾ ನಿರ್ದೇಶಕರಾದ ಚಂದ್ರಮೌಳಿ, ಸಮಾಜ ಕಲ್ಯಾಣ ಇಲಾಖೆ ಉಪ ನಿರ್ದೇಶಕ ದೂದ್‌ಫಿರ್ ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಸಭೆಯಲ್ಲಿ ಹಾಜರಿದ್ದರು.

## ಬಸವೇಶ್ವರ ಪ್ರತಿಮೆ ಬಳಿ ರಾಜಕೀಯ ಚಟುವಟಿಕೆ ನಿಷೇಧ

• ಪ್ರಜೋದಯ ವರದಿ

**ಸಕಲೇಶಪುರ:** ಬಸವೇಶ್ವರ ಪ್ರತಿಮೆಯ ಆವರಣದಲ್ಲಿ ರಾಜಕೀಯ ಚಟುವಟಿಕೆಗಳನ್ನು ನಡೆಸುವುದನ್ನು ನಿಷೇಧಿಸಲು ಸಮಾಜದ ಮುಖಂಡರು ನಿರ್ಧಾರ ಮಾಡಿದ್ದಾರೆ.

ಪಟ್ಟಣದ ಬಸವೇಶ್ವರ ಪ್ರತಿಮೆಯ ಆವರಣದಲ್ಲಿ ಕಾಂಗ್ರೆಸ್ ಪಕ್ಷದವರು ಮಂಗಳವಾರ ಎಸ್‌ಐಆರ್ ವಿರೋಧಿಸಿ ಸಹಿ ಸಂಗ್ರಹ ಅಭಿಯಾನ ನಡೆಸಿದ ಹಿನ್ನೆಲೆ ಮಲೆನಾಡು ವೀರಶೈವ ಸಮಾಜದ ಮುಖಂಡರು ತೀವ್ರ ಅಸಮಾಧಾನ ವ್ಯಕ್ತಪಡಿಸಿದರು.

ಸಮಾಜದ ಅಧ್ಯಕ್ಷ ಧರ್ಮಪ್ಪ ಮಾತನಾಡಿ, ಬಸವೇಶ್ವರ ಪ್ರತಿಮೆಯ ಪವಿತ್ರ ಸ್ಥಳದಲ್ಲಿ ರಾಜಕೀಯ ಕಾರ್ಯಕ್ರಮ ನಡೆಸುವುದು ಅಸಂಗತ. ಯಾವುದೇ ಸಂಘಟನೆಗಳು ಮುಂದಿನ ದಿನಗಳಲ್ಲಿ ರಾಜಕೀಯ ಚಟುವಟಿಕೆ ನಡೆಸಲು ಅವಕಾಶವಿಲ್ಲ. ಸಮಾಜದ ಅನುಮತಿ ಪಡೆಯದೆ ಕಾರ್ಯಕ್ರಮ ನಡೆಸುವುದು ತಪ್ಪು ಎಂದು ಸ್ಪಷ್ಟಪಡಿಸಿದರು.

ಮಹಾನ್ ಮಾನವತಾವಾದಿ ಬಸವಣ್ಣನವರು ಒಂದು ಪಂಗಡಕ್ಕೆ,




ಒಂದು ಜಾತಿಗೆ ಸೇರಿದವರಲ್ಲ. ಅವರು ಸಮಾಜದ ಪ್ರತಿಯೊಬ್ಬರಿಗೂ ಬೇಕಾದವರು. ಹಾಗಾಗಿ ಇಲ್ಲಿ ರಾಜಕೀಯ ಸಲ್ಲದು ಎಂದರು.

ಬಿಜೆಪಿ ಹಾಗೂ ಸಮಾಜದ ಮುಖಂಡ ಎ.ವಿ.ನರೇಶ್ ಅವರು ಮಾತನಾಡಿ, ಬಸವೇಶ್ವರ ಪ್ರತಿಮೆ ಎಲ್ಲ ಧರ್ಮಸಮುದಾಯದವರ ಸಹಕಾರದಿಂದ ನಿರ್ಮಾಣಗೊಂಡ ಪವಿತ್ರ ಸ್ಥಳ. ಇಲ್ಲಿ ರಾಜಕೀಯ ಘೋಷಣೆಗಳು ಅಥವಾ ಪ್ರತಿಭಟನೆ ಗಳು ನಡೆಯುವುದು ಸರಿಯಲ್ಲ. ಇಂತಹ ಘಟನೆಗಳು ಮರುಕಳಿಸದಂತೆ ಸಮಾಜ ಕ್ರಮ ಕೈಗೊಳ್ಳಲಿದೆ ಎಂದು ಹೇಳಿದರು.

ಬಸವಣ್ಣನವರ ತತ್ತ್ವ ಸಮಾನತೆ ಮತ್ತು ಸೌಹಾರ್ದತೆಯ ಸಂಕೇತ. ಪ್ರತಿಮೆಯ ಆವರಣವನ್ನು ಧಾರ್ಮಿಕ ಮತ್ತು ಸಾಮಾಜಿಕ ಉದ್ದೇಶಗಳಿಗೆ ಮಾತ್ರ ಬಳಸಲಾಗುತ್ತದೆ ಎಂದು ಸ್ಪಷ್ಟಪಡಿಸಿದರು.

ಈ ಸಂದರ್ಭದಲ್ಲಿ ಬಿಜೆಪಿ ಜಿಲ್ಲಾ ಮಹಿಳಾ ಘಟಕದ ಅಧ್ಯಕ್ಷೆ ನೇತ್ರಾವತಿ ಇತರರು ಉಪಸ್ಥಿತರಿದ್ದರು.

## ಮೌಲ್ಯವರ್ಧಿತ ಕಲಿಕೆಗೆ ವಿದ್ಯಾರ್ಥಿಗಳು ಗಮನಹರಿಸಿ

### ನಿವೃತ್ತ ಪ್ರಾಂಶುಪಾಲ ಡಾ.ಡಿ.ಜಿ.ಕೃಷ್ಣೇಗೌಡ ಸಲಹೆ

• ಪ್ರಜೋದಯ ವರದಿ

**ಹೊಳೆನರಸೀಪುರ:** ವಿದ್ಯಾರ್ಥಿಗಳಾದ ನೀವುಗಳೇ ನಿಮ್ಮ ಅಂತಸತ್ವವನ್ನು ಗುರುತಿಸಿ ಉತ್ತಮ ಭವಿಷ್ಯ ಕಟ್ಟಿಕೊಳ್ಳಬೇಕು ಎಂದು ನಿವೃತ್ತ ಪ್ರಾಂಶುಪಾಲ ಡಾ.ಡಿ.ಜಿ.ಕೃಷ್ಣೇಗೌಡ ಸಲಹೆ ನೀಡಿದರು.

ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನಲ್ಲಿ ನಡೆದ ಪ್ರಸಕ್ತ ಸಾಲಿನ ಕ್ರೀಡಾ ಮತ್ತು ಸಾಂಸ್ಕೃತಿಕ ಘಟಕಗಳ ಉದ್ಘಾಟನಾ ಸಮಾರಂಭ ಉದ್ಘಾಟಿಸಿ ಮಾತನಾಡಿದ ಅವರು, ಪ್ರಾಧ್ಯಾಪಕರು ಬೋಧಿಸುವ ಮೂಲಕ ತಮ್ಮ ಕಲಿಕೆಗೆ ಪೂರಕವಾಗಿರುತ್ತಾರೆ. ಪೋಷಕರು ಮಾರ್ಗದರ್ಶನ ನೀಡಿ ಸಲಹುತ್ತಾರೆ. ಆದರೆ ವ್ಯಕ್ತಿತ್ವ ವಿಕಸನಕ್ಕೆ ತಾವುಗಳೇ ತಮ್ಮ ಸಾಮರ್ಥ್ಯವನ್ನು ಗುರುತಿಸಿ



ಬೆಳಸಿಕೊಳ್ಳಬೇಕು. ಈ ನಿಟ್ಟಿನಲ್ಲಿ ತಮ್ಮ ದೃಢತೆ ಬಹುಮುಖ್ಯವಾಗಿರುತ್ತದೆ. ಮೌಲ್ಯವರ್ಧಿತ ಕಲಿಕೆಗೆ ವಿದ್ಯಾರ್ಥಿಗಳು ಗಮನ ಹರಿಸಬೇಕು. ಪದವಿಗಳನ್ನು ಪಡೆದವರೆಲ್ಲ ಉದ್ಯೋಗ ಹೊಂದುತ್ತಾರೆ ಎಂಬುದು ವಾಸ್ತವಕ್ಕೆ ದೂರವಾದ ಮಾತು. ಆದರೆ ಪ್ರಾವೀಣ್ಯತೆ ಮತ್ತು ಕೌಶಲ್ಯಯುತರಾದಲ್ಲಿ ಯಾವುದೇ ಕ್ಷೇತ್ರದಲ್ಲೂ ಯಶಸ್ಸು ಕಾಣಬಹುದು ಎಂದು ತಿಳಿಸಿದರು.

ಕಾಲೇಜು ಸಾಂಸ್ಕೃತಿಕ ಸಮಿತಿ ಸಂಚಾಲಕ ಎನ್.ತಿಪ್ಪೇಸ್ವಾಮಿ ಮಾತನಾಡಿ, ವರ್ಷಕ್ಕೆ ಲಕ್ಷಾಂತರ ಪದವೀಧರರು ಹೊರಬರುತ್ತಿದ್ದಾರೆ. ಅವರಲ್ಲಿ ಸಾವಿರದಷ್ಟು ಮಂದಿ ಸರ್ಕಾರಿ ಉದ್ಯೋಗ ಹೊಂದುತ್ತಿದ್ದಾರೆ. ಉಳಿದಂತೆ ಸ್ವ ಉದ್ಯೋಗ ಇಲ್ಲವೇ ಖಾಸಗಿ ಕಂಪನಿಗಳಲ್ಲಿ ಕೆಲಸಕ್ಕೆ ತೊಡಗಿಸಿಕೊಂಡಿದ್ದಾರೆ. ಗುರಿ ಮತ್ತು ಗುರುವಿನ ಮಾರ್ಗದರ್ಶನ ಮತ್ತು ಕಠಿಣ ಪರಿಶ್ರಮದ ಅಭ್ಯಾಸ ಸಾಧನೆಗೆ ಹಾದಿಮಾಡಿಕೊಡುತ್ತದೆ ಎಂದರು.

ಪ್ರಾಂಶುಪಾಲ ಕೆ.ಗುರುರಾಜು, ಐಕ್ಯುಎಸಿ ಸಂಚಾಲಕ ಡಾ.ಎಚ್.ಎನ್.ಮಂಜುರಾಜು, ಎನ್‌ಎಸ್‌ಎಸ್ ಅಧಿಕಾರಿ ಡಾ.ಕುಸುಮ, ಯುವ ರೆಡ್‌ಕ್ರಾಸ್ ಸಂಚಾಲಕಿ ಕೆ.ಎಸ್. ಚಂದ್ರಕಲಾ ಹಾಗೂ ರೇಂಜರ್ಸ್ ಸಂಚಾಲಕಿ ವಿದ್ಯಾ ಉಪಸ್ಥಿತರಿದ್ದರು.

## ಎಲ್‌ಟಿಎಬಿ ಕೇಬಲ್ ಅಳವಡಿಸುವ ಕೆಲಸ ಆರಂಭ

• ಪ್ರಜೋದಯ ವರದಿ

**ಸಕಲೇಶಪುರ:** ಪುರಸಭಾ ವ್ಯಾಪ್ತಿಯ ಜನಜಂಗುಳಿ ಪ್ರದೇಶಗಳಲ್ಲಿ ಸುಮಾರು 2.5 ಕೋಟಿ ರೂ. ವೆಚ್ಚದಲ್ಲಿ ಎಲ್‌ಟಿಎಬಿ ಕೇಬಲ್‌ಗಳನ್ನು ಅಳವಡಿಸುವ ಕೆಲಸ ಆರಂಭವಾಗಲಿದೆ ಎಂದು ಶಾಸಕ ಸಿಮೆಂಟ್ ಮಂಜು ತಿಳಿಸಿದರು.

ಪಟ್ಟಣದ ಸಕಲೇಶ್ವರಸ್ವಾಮಿ ದೇವಸ್ಥಾನದ ಮುಂಭಾಗದಲ್ಲಿ ನಡೆದ ಕಾರ್ಯಕ್ರಮದಲ್ಲಿ ಭೂಮಿಪೂಜೆ ನೆರವೇರಿಸಿ ಮಾತನಾಡಿ, ಪಟ್ಟಣ ಪ್ರದೇಶಗಳಲ್ಲಿ ಕಟ್ಟಡಗಳು ಪರಸ್ಪರ ಹತ್ತಿರವಾಗಿರುವುದರಿಂದ ಹಾಗೂ ರಥೋತ್ಸವ ಸೇರಿದಂತೆ ವಿವಿಧ ಸಂದರ್ಭಗಳಲ್ಲಿ ವಿದ್ಯುತ್ ಅವಘಡಗಳು ಸಂಭವಿಸದಂತೆ ನೋಡಿಕೊಳ್ಳುವುದು ಈ ಯೋಜನೆಯ ಉದ್ದೇಶವಾಗಿದೆ ಎಂದು ಹೇಳಿದರು.

ಸುಮಾರು 2.52 ಕೋಟಿ ರೂ. ವೆಚ್ಚದ ಈ ಯೋಜನೆಯಡಿ ಬಿಎಂ



ರೋಡ್ (ಬೆಂಗಳೂರು- ಮಂಗಳೂರು ರಸ್ತೆ), ಆಜಾದ್ ರೋಡ್ ಹಾಗೂ ಅಶೋಕ್ ರೋಡ್ ಸೇರಿದಂತೆ ಪ್ರಮುಖ ರಸ್ತೆಗಳು ಒಳಗೊಂಡಿವೆ. ಈ ಯೋಜನೆಯಿಂದ ಪಟ್ಟಣದ ನಿವಾಸಿಗಳಿಗೆ ಸುರಕ್ಷತೆ ಹೆಚ್ಚುವುದರ ಜೊತೆಗೆ ಸಕಲೇಶಪುರವೂ ಸ್ವಚ್ಛತೆ ಹಾಗೂ ಸೌಂದರ್ಯದಲ್ಲಿ ಇತರ ಪಟ್ಟಣಗಳಿಗೆ ಸಮಾನವಾಗಲಿದೆ ಎಂದು ಹೇಳಿದರು.

ಸಮಾರಂಭದಲ್ಲಿ ಪುರಸಭಾ ಮುಖ್ಯಾಧಿಕಾರಿ ಮಹೇಶ್ವರಪ್ಪ, ಚೆಸ್ಕಾಂ ಇಲಾಖೆಯ ಎಕ್ಸಿಕ್ಯೂಟಿವ್ ಇಂಜಿನಿಯರ್ ವೆಂಕಟೇಶ್, ಎಇ ನಿರಂಜನ್, ಎ.ಇ.ಇ ಹರೀಶ್, ಜೈಶಂಕರ್ ಬಾಬು, ಹಾಗೂ ಲೋಹಿತ್ ಕೌಡಳ್ಳಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ನ.04 ರಂದು ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆ

• ಪ್ರಜೋದಯ ವರದಿ

**ಹಾಸನ:** ಸಕಲೇಶಪುರ, ಆಲೂರು ಮತ್ತು ಕಟ್ಟಾಯ ವಿಧಾನ ಸಭಾ ಕ್ಷೇತ್ರದ ಶಾಸಕ ಎಸ್.ಮಂಜುನಾಥ್ ರವರ ಅಧ್ಯಕ್ಷತೆಯಲ್ಲಿ 2025-26 ನೇ ಸಾಲಿನ ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳ ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆಯನ್ನು ನ.04 ರಂದು ಪೂರ್ವಾಹ್ನ 11.30 ಗಂಟೆಗೆ ಸಕಲೇಶಪುರ ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ಏರ್ಪಡಿಸಲಾಗಿದೆ ಎಂದು ಸಕಲೇಶಪುರ ತಾಲ್ಲೂಕು ಪಂಚಾಯಿತಿ ಕಾರ್ಯ ನಿರ್ವಾಹಕ ಅಧಿಕಾರಿ ಹಾಗೂ ತ್ರೈಮಾಸಿಕ ಕೆ.ಡಿ.ಪಿ ಸಭೆಯ ಸದಸ್ಯ ಕಾರ್ಯದರ್ಶಿ ಅವರು ತಿಳಿಸಿದ್ದಾರೆ.

## ನಿಜ ಜೀವನದಲ್ಲಿಯೂ ಮಾದರಿಯಾಗಿದ್ದ ‘ಅಪ್ಪು’

• ಪ್ರಜೋದಯ ವರದಿ

**ಸಕಲೇಶಪುರ:** ಯಾವ ಕೆಲಸ ಮಾಡಿದರೂ ಅದನ್ನು ಹೇಳಿಕೊಳ್ಳದವರು, ಮಾಡಿದ ದಾನ ಎಡಗೈ ಕೊಟ್ಟಾಗ ಬಲಗೈಗೂ ಗೊತ್ತಾಗಬಾರದು ಎನ್ನುವ ಗಾದೆಗೆ ನಿಜವಾದ ಅರ್ಥ ನೀಡಿದವರು ನಟ ಪುನೀತ್ ರಾಜಕುಮಾರ್ ಎಂದು ಶಾಸಕ ಸಿಮೆಂಟ್ ಮಂಜು ಹೇಳಿದರು.

ಕುಶಾಲನಗರ ಗೆಳೆಯರ ಬಳಗದ ವತಿಯಿಂದ ಇಂದು ಕೌಡಹಳ್ಳಿ ವಿಶೇಷ ಚೇತನ ಮಕ್ಕಳ ಶಾಲೆಯಲ್ಲಿ ಡಾ. ಪುನೀತ್ ರಾಜಕುಮಾರ್ ಅವರ ನಾಲ್ಕನೇ ವರ್ಷದ ಪುಣ್ಯಸ್ಮರಣೆ ಕಾರ್ಯಕ್ರಮದಲ್ಲಿ ಅಪ್ಪು ಅವರ ಭಾವಚಿತ್ರಕ್ಕೆ ದೀಪ ಬೆಳಗಿಸಿದ ನಂತರ ಮಾತನಾಡಿ, ಪುನೀತ್ ರಾಜಕುಮಾರ್ ಅವರ ಮರಣದ ನಂತರ ಜನರು ಅವರ ಪುಣ್ಯಕರ್ಮಗಳನ್ನು ಅರಿತುಕೊಂಡರು. ಅವರು ನಟನೆಯಲ್ಲಿ ಮಾತ್ರವಲ್ಲ, ನಿಜ ಜೀವನದಲ್ಲಿಯೂ ಮಾದರಿಯಾಗಿದ್ದರು. ಅವರ ಪ್ರತಿಯೊಂದು ಪಾತ್ರದಲ್ಲಿಯೂ ಒಳ್ಳೆಯ ಸಂದೇಶ ಇತ್ತು. ಯಾವ ಚಿತ್ರದಲ್ಲೂ ಕೆಟ್ಟ ಅಂಶ ಇರಲಿಲ್ಲ. ಯುವಕರಿಗೆ ಸ್ಪೂರ್ತಿಯಾದವರು ಅಪ್ಪು ಎಂದರು.

ಡಾ. ರಾಜ್‌ಕುಮಾರ್ ಅವರ ಪ್ರತಿಭೆಯ ಬೆಳಕು ಅಪ್ಪೂವರಲ್ಲಿ ಸ್ಪಷ್ಟವಾಗಿ ಕಾಣಿಸಿತು. ಬಾಲ್ಯದಿಂದಲೇ ಸಿನಿರಂಗದಲ್ಲಿ ಸಕ್ರಿಯರಾಗಿದ್ದ ಅವರು, ಸುಮಾರು ನಾಲ್ಕು ದಶಕಗಳ ಕಾಲ ಜನಮನಗಳಲ್ಲಿ ಅಚ್ಚಳಿಯದ ಗುರುತು ಬರೆದಿದ್ದಾರೆ. ಇಂದಿಗೂ ಅವರ ನಟನೆ, ನಡತೆ ಹಾಗೂ ಸಮಾಜಮುಖಿ ಚಿಂತನೆ ಯುವ ಪೀಳಿಗೆಗೆ ದಾರಿ ತೋರಿಸುತ್ತಿದೆ ಎಂದರು.



ರೋಟರಿ ಟ್ರಸ್ಟ್‌ನ ಕಾರ್ಯದರ್ಶಿ ರವಿಕುಮಾರ್ ಮಾತನಾಡಿ, ಈ ದೇಶ ಮತ್ತು ರಾಜ್ಯ ಕಂಡ ಅಪರೂಪದ ವ್ಯಕ್ತಿತ್ವ ಪುನೀತ್ ರಾಜಕುಮಾರ್ ಅವರು ಇಂದು ನಮ್ಮೊಂದಿಗೆ ಇಲ್ಲದಿದ್ದರೂ, ಪ್ರತಿಯೊಬ್ಬ ಮನೆಯ ಮಗನಾಗಿ ಜನಮನಗಳಲ್ಲಿ ಜೀವಂತವಾಗಿದ್ದಾರೆ. ಅವರು ಮಾಡಿದ ದಾನ ಧರ್ಮಗಳು ಎಂದಿಗೂ ಪ್ರಸ್ತುತವಾಗಿಯೇ ಇರುತ್ತವೆ. ಅವರ ಹಾದಿಯಲ್ಲಿ ನಾವೆಲ್ಲ ನಡೆಯೋಣ ಎಂದರು.

ಜೂನಿಯರ್ ಪುನೀತ್ ರಾಜಕುಮಾರ್ ಮಾತನಾಡಿ, ಪುನೀತ್ ರಾಜಕುಮಾರ್ ಎಂದಿಗೂ ನಮ್ಮೊಂದಿಗೆ ಇದ್ದಾರೆ. ಅವರು ಮಾಡಿದ ಪುಣ್ಯದ ಕಾರ್ಯಗಳು ಜನಮನದಲ್ಲಿ ಸದಾ ಉಳಿದುಕೊಳ್ಳುತ್ತವೆ. ಅವರಿಂದ ಲಕ್ಷಾಂತರ ಮಂದಿ ಸ್ಪೂರ್ತಿಗೊಂಡು ರಕ್ತದಾನ, ನೇತ್ರದಾನ ಮಾಡುವ ಹಾದಿಯಲ್ಲಿ ನಡೆಯುತ್ತಿದ್ದಾರೆ ಎಂದರು.

ಪುರಸಭಾ ಸದಸ್ಯ ಪ್ರಜ್ವಲ್, ಹಾಸನ ಜಿಲ್ಲಾ ಬೆಳಗಾರರ ಸಂಘದ ಕಾರ್ಯದರ್ಶಿ ಲೋಹಿತ್ ಕೌಡಹಳ್ಳಿ, ಕೌಶಿಕ್, ರೋಟರಿ ವಿಶೇಷ ಚೇತನ ಶಾಲೆಯ ಮುಖ್ಯೋಪಾಧ್ಯಾಯ ಈಶ್ವರಪ್ಪ, ಶಿಕ್ಷಕರು, ಸಿಬ್ಬಂದಿ ವರ್ಗದವರು, ಸುಬೇಂದ್ರ ನಾಯ್ಡು, ಕುಶಾಲನಗರ ಗೆಳೆಯರ ಬಳಗದ ಬಾಲು, ವಿನಯ್, ರಘು, ಆದರ್ಶ, ಪ್ರೀತಮ್, ಮಣಿ, ನಿಖಿಲ್, ಆಟೋ ಜಾನಿ ಮತ್ತಿತರರು ಉಪಸ್ಥಿತರಿದ್ದರು.

ಪುನೀತ್ ರಾಜಕುಮಾರ್ ಅವರ ಪುಣ್ಯಸ್ಮರಣೆ ಅಂಗವಾಗಿ ಮಕ್ಕಳಿಗೆ ಅನ್ನಸಂತರ್ಪಣೆ ಮಾಡಲಾಯಿತು.

## ಮಕ್ಕಳಿಂದ ಪಠ್ಯೇತರ ಕೆಲಸ: ಜನರ ಆಕ್ರೋಶ

• ಪ್ರಜೋದಯ ವರದಿ

**ಅರಕಲಗೂಡು:** ಪಟ್ಟಣದ ಬಿಇಒ ಕಚೇರಿ ಆವರಣದಲ್ಲಿರುವ ಪಿಎಂ ಶ್ರೀ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯ ಶಿಕ್ಷಕ, ಸಹ ಶಿಕ್ಷಕರು ಹಾಗೂ ಅಡುಗೆ ಸಿಬ್ಬಂದಿಗಳ ಕಾರ್ಯವೈಖರಿಗೆ ಸಾರ್ವಜನಿಕ ವಲಯದಲ್ಲಿ ತೀವ್ರ ವಿರೋಧ ವ್ಯಕ್ತವಾಗಿದೆ.

ಮಕ್ಕಳಿಂದ ಮೊಟ್ಟೆ ಹಾಗೂ ತರಕಾರಿಗಳನ್ನು ಮಾರುಕಟ್ಟೆಯಿಂದ ತರುವಂತಹ ಕೆಲಸಗಳನ್ನು ಮಾಡಿಸುತ್ತಿರುವುದು ಇದಕ್ಕೆ ಕಾರಣವಾಗಿದೆ.

ಮಂಗಳವಾರದಂದು ಶಾಲಾ ಮಕ್ಕಳು ಭಯವಿಲ್ಲದೆ ದಿನವಹಿ ಮಾರುಕಟ್ಟೆಗೆ ತೆರಳಿ ತರಕಾರಿ, ಮೊಟ್ಟೆಗಳನ್ನು ತರುತ್ತಿರುವ ದೃಶ್ಯವನ್ನು ಕಂಡ ಸಾರ್ವಜನಿಕರು ಗಾಬರಿಗೊಂಡಿದ್ದಾರೆ. ಶಿಕ್ಷಣ ಇಲಾಖೆಯ ಕಚೇರಿಗಳ ಪಕ್ಕದಲ್ಲೇ ಇರುವ ಶಾಲಾ ಆಡಳಿತ



ಮಂಡಳಿಯು ಈ ರೀತಿ ಮಕ್ಕಳನ್ನು ದುರ್ಬಳಕೆ ಮಾಡಿಕೊಳ್ಳುತ್ತಿರುವುದು ಸರಿಯಲ್ಲ ಎಂದು ಜನರು ವ್ಯಾಪಕ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಶೈಕ್ಷಣಿಕ ಕಾರ್ಯಗಳಿಗೆ ಸೀಮಿತರಾಗಿರಬೇಕಾದ ಶಾಲಾ ಮಕ್ಕಳು ಅಪಾಯಕಾರಿ ಪೇಟೆಯ ರಸ್ತೆಗಳಲ್ಲಿ ಓಡಾಡಿ ವಸ್ತುಗಳನ್ನು ತರುವ ಕೆಲಸ ಮಾಡುವುದನ್ನು ಶಿಕ್ಷಣ ಇಲಾಖೆ ಗಂಭೀರವಾಗಿ ಪರಿಗಣಿಸಿ, ಶಾಲಾ ಆಡಳಿತ ಮಂಡಳಿ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕು, ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಸಾರ್ವಜನಿಕರು ಆಗ್ರಹಿಸಿದ್ದಾರೆ.

## ಸಹಕಾರಿ ಸಂಘಗಳಿಂದ ಸಮಾಜದ ಉನ್ನತೀಕರಣ

• ಪ್ರಜೋದಯ ವರದಿ

**ಹೊಳೆನರಸೀಪುರ:** ಸಹಕಾರಿ ಸಂಘಗಳು ಉತ್ತಮ ಕಾರ್ಯ ಚಟುವಟಿಕೆ ನಡೆಸಿ ಸಮಾಜದ ಉನ್ನತೀಕರಣದಲ್ಲಿ ಸಹಕಾರಿಯಾಗಿವೆ ಎಂದು ಸೌಹಾರ್ದ ಸಂಯುಕ್ತ ಸಹಕಾರಿ ಸಂಘದ ಪ್ರಾಂತೀಯ ಅಧಿಕಾರಿ ಗುರುಪ್ರಸಾದ್ ಬಂಗೇರ ತಿಳಿಸಿದರು.

ಪಟ್ಟಣದಲ್ಲಿ ಪ್ರವರ್ತಕರ ಸಭೆ ನಡೆಸಿ ಮಾತನಾಡಿದ ಅವರು, ಸೌಹಾರ್ದ ಸಹಕಾರಿ ಅಧಿನಿಯಮ 1997 ರಲ್ಲಿ ಜಾರಿಯಾಗಿದ್ದು, ಪ್ರಸ್ತುತ 25 ನೇ ಬೆಳ್ಳಿ ಹಬ್ಬದ ಸಂಭ್ರಮಾಚರಣೆಯ ಹೊಸ್ತಿಲಲ್ಲಿ ಇದೆ. ಇದರಿಂದ ಅಲ್ಲಲ್ಲಿ ಪ್ರವರ್ತಕರ ಸಭೆ ನಡೆಸಲಾಗುತ್ತಿದೆ. ಹೈನುಗಾರಿಕೆ, ಹಾಲು ಹಾಗೂ ಇತರೆ ಸಹಕಾರಿ ಸಂಘಗಳು ಸೇರಿ ಒಟ್ಟು 15 ನೊಂದಾಯಿತ ವಿವಿಧ ಚಟುವಟಿಕೆ



ನಡೆಸಿರುವ 6500 ಕ್ಕಿಂತ ಹೆಚ್ಚಿನ ಸೌಹಾರ್ದ ಸಹಕಾರಿ ಸಂಘಗಳು ಇವೆ. ಸಮಾಜಕ್ಕೆ ಸಹಕಾರಿಯಾಗಿ ಯಶಸ್ವಿಯಾಗಿ ಕಾರ್ಯ ನಿರ್ವಹಿಸಿರುವುದು ಆಚರಣೆಯ ಸಂಭ್ರಮಕ್ಕೆ ಕಾರಣವಾಗಿದೆ ಎಂದು ಮೆಚ್ಚುಗೆ ಸೂಚಿಸಿದರಲ್ಲದೆ, ಇದು ಹೀಗೆಯೇ ಮುಂದುವರಿಯಬೇಕು ಎಂದು ಅವರು ಅಭಿಪ್ರಾಯಿಸಿದರು.

ನೂರಾರು ಪ್ರವರ್ತಕರು ಸಭೆಯಲ್ಲಿ ಭಾಗಿಯಾಗಿದ್ದರು.

ಸೌಹಾರ್ದ ಅಭಿವೃದ್ಧಿ ಅಧಿಕಾರಿ ಅಶೋಕ್‌ಕುಮಾರ್, ಕಾರ್ಯ ನಿರ್ವಾಹಕ ಅಧಿಕಾರಿ ವೈರಮುಡಿ ಹಾಗೂ ಹಿರಿಯ ವಕೀಲ ಆರ್.ಡಿ. ರವೀಶ್ ಉಪಸ್ಥಿತರಿದ್ದರು.

## ಮಕ್ಕಳನ್ನು ಇತರೆ ಚಟುವಟಿಕೆಗಳಿಗೆ ಬಳಸಿದರೆ ಶಿಸ್ತು ಕ್ರಮ

### ಶಿಕ್ಷಕರಿಗೆ ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಪಿ.ನಾರಾಯಣ ಎಚ್ಚರಿಕೆ

• ಪ್ರಜೋದಯ ವರದಿ

**ಅರಕಲಗೂಡು:** ಶಾಲಾ ಮಕ್ಕಳನ್ನು ತರಕಾರಿ, ಮೊಟ್ಟೆ ತರಲು ಹಾಗೂ ಇತರೆ ಚಟುವಟಿಕೆಗಳಿಗೆ ಬಳಕೆ ಮಾಡುವುದು ಕಂಡು ಬಂದರೇ ನಿರ್ದಾಕ್ಷಿಣ್ಯವಾಗಿ ಕ್ರಮ ಜರುಗಿಸಲಾಗುವುದು ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಪಿ.ನಾರಾಯಣ ಅವರು ಶಿಕ್ಷಕರಿಗೆ ಎಚ್ಚರಿಕೆ ನೀಡಿದ್ದಾರೆ.

ಬುಧವಾರ ಪಟ್ಟಣದ ಪಿಎಂಶ್ರೀ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಮುಖ್ಯಶಿಕ್ಷಕ ವಸಂತ್ ಮತ್ತು ಇತರೆ ಸಹ ಶಿಕ್ಷಕರು ಹಾಗೂ ಅಡುಗೆ ಸಿಬ್ಬಂದಿಗಳೊಂದಿಗೆ ಸಮಾಲೋಚನೆ ನಡೆಸಿದ ಬಳಿಕ ಮಾತನಾಡಿದ ಅವರು, ಶಾಲೆಯ ಮಕ್ಕಳನ್ನು ಮೊಟ್ಟೆ ಮತ್ತು ತರಕಾರಿ ತರಲು ಬಳಕೆ ಮಾಡಿಕೊಂಡಿರುವ ಕುರಿತು ಸಾರ್ವಜನಿಕ ವಲಯ ಮತ್ತು ಪೋಷಕರಿಂದ ತೀವ್ರ ಆಕ್ಷೇಪ ವ್ಯಕ್ತವಾಗಿದೆ. ಶಾಲೆಯಲ್ಲಿ ಶಿಕ್ಷಕರು, ಅಡುಗೆಯವರು ಇದ್ದರೂ ಕೂಡ ಶಾಲಾ ಅವಧಿಯಲ್ಲಿ ಹೇಗೆ ಮಕ್ಕಳಿಂದ ಈ ಕೆಲಸ ಮಾಡಿಸಿದ್ದೀರಿ ಎಂದು ಮುಖ್ಯ ಶಿಕ್ಷಕ ವಸಂತ್ ಅವರನ್ನು ತೀವ್ರವಾಗಿ ತರಾಟೆಗೆ ತೆಗೆದುಕೊಂಡರಲ್ಲದೆ ಈ ಬಗ್ಗೆ ಶೋಕಾಸ್ ನೋಟಿಸ್ ನೀಡಲಾಗುವುದು ಎಂದು ಎಚ್ಚರಿಸಿದರು.

ಬಿಇಒ ಕಚೇರಿ ಆವರಣದಲ್ಲಿನ ಶಾಲೆಯಲ್ಲಿನ ಮಕ್ಕಳಿಂದ ಇಂತಹ ಕೆಲಸವನ್ನು ಮಾಡಿಸಲು ಹೇಗೆ ಸಾಧ್ಯವಾಯಿತು. ಅಧಿಕಾರಿಗಳೆಂದರೇ ಭಯವಿಲ್ಲವೇ? ಅಲ್ಲದೆ ಮಕ್ಕಳು ಪಟ್ಟಣದಿಂದ ಬಂದವರಾಗಿದ್ದಾರೆ. ಅವರ ಪೋಷಕರು ಮಕ್ಕಳು ತರಕಾರಿ, ಮೊಟ್ಟೆಯನ್ನು ಕೈಯಲ್ಲಿಡಿದು ಬರುತ್ತಿರುವುದನ್ನು ಕಂಡು ಗಾಬರಿಗೊಂಡಿದ್ದಾರೆ. ಇಂತಹ ಸಂದರ್ಭದಲ್ಲಿ



ಯಾವುದೇ ಅನಾಹುತ ನಡೆದರೇ ಯಾರೂ ಹೊಣೆ, ಇಂತಹ ಬೇಜವಬ್ದಾರಿಯನ್ನು ನಾನು ಸಹಿಸುವುದಿಲ್ಲ ಎಂದು ಶಿಕ್ಷಕರು,ಅಡುಗೆ ಸಿಬ್ಬಂದಿಗಳ ವಿರುದ್ಧ ಹರಿಹಾಯ್ದರು.

ಶತಮಾನ ಪೂರೈಸಿರುವ ಈ ಶಾಲೆಗೆ ಸರ್ಕಾರದಿಂದ ವಿಶೇಷ ಅನುದಾನ ಬರುತ್ತಿದೆ. ಇದರಿಂದ ಅಗತ್ಯವಾದ ಮೂಲ ಸೌಕರ್ಯಗಳು ಮಕ್ಕಳಿಗೆ ದೊರೆಯಲಿದೆ. ಆಂಗ್ಲ ಮಾಧ್ಯಮ ಶಾಲೆಯಾಗಿಯೂ ಕಾರ್ಯ ನಿರ್ವಹಿಸುತ್ತಿದೆ. ಪೋಷಕರ ವಿಶ್ವಾಸ ಕೂಡ ಅಧಿಕವಾಗಿದೆ. ಇದನ್ನು ಅರಿತು ಶಿಕ್ಷಕರು ಕಾರ್ಯ ನಿರ್ವಹಿಸಬೇಕು. ಮತ್ತೊಮ್ಮೆ ಈ ರೀತಿಯಾಗಿ ವಿದ್ಯಾರ್ಥಿಗಳ ದುರ್ಬಳಕೆ ಕಂಡು ಬಂದರೇ ಕಾನೂನು ರೀತಿ ಕ್ರಮ ಜರುಗಿಸಲಾಗುವುದು ಎಂದು ಕಟ್ಟುನಿಟ್ಟಿನ ಸೂಚನೆ ನೀಡಿದರು.

ಪಟ್ಟಣ ಸೇರಿದಂತೆ ತಾಲೂಕಿನ ಯಾವುದೇ ಶಾಲೆಗಳ ಮಕ್ಕಳನ್ನು ತರಕಾರಿ,ಮೊಟ್ಟೆ ಹಾಗೂ ಇತರೆ ಕಾರ್ಯಗಳಿಗೆ ಬಳಕೆ ಮಾಡುವುದು ಕಂಡುಬಂದರೇ ಆಯಾ ಕ್ಲಸ್ಟರ್‌ನ ಅಧಿಕಾರಿಗಳನ್ನು ನೇರವಾಗಿ ಹೊಣೆಯನ್ನಾಗಿ ಮಾಡಲಾಗುವುದು.ಕಡ್ಡಾಯವಾಗಿ ವಾರದ ಎಲ್ಲಾ ದಿನವು ಮೊಟ್ಟೆ, ಬಾಳೆ ಹಣ್ಣುಗಳನ್ನು ನೀಡಬೇಕಿದೆ. ಕೆಲವು ಶಾಲೆಗಳಲ್ಲಿ ವಾರದ ಒಂದೆರಡು ದಿನ ಮೊಟ್ಟೆ ನೀಡದೇ ಕೇವಲ ಬಾಳೆ ಹಣ್ಣು ನೀಡುತ್ತಿರುವ ಬಗ್ಗೆ ಮಾಹಿತಿ ಲಭ್ಯವಾಗಿದೆ. ಅಂತಹ ಶಾಲೆಗಳ ಮುಖ್ಯ ಶಿಕ್ಷಕರ ಬಗ್ಗೆ ಗಮನಹರಿಸಲಾಗಿದೆ ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದರು. ಸಭೆಯಲ್ಲಿ ಅಕ್ಷರ ದಾಸೋಹ ಅಧಿಕಾರಿ ರಂಗಸ್ವಾಮಿ ಇತರರಿದ್ದರು.

ಗುತ್ತಿಗೆದಾರರ ನಿರ್ಲಕ್ಷ್ಯದಿಂದಾಗಿ ಅಲ್ಲಲ್ಲಿ ಅಪೂರ್ಣ-ಗುಣಮಟ್ಟವೂ ಕಳಪೆ ಎಂಬ ಆರೋಪ

# ಕುಂಟುತ್ತಾ ಸಾಗುತ್ತಿದೆ ಜೆ.ಜೆ.ಎಂ.ಕಾಮಗಾರಿ

• ಪ್ರಜೋದಯ ವರದಿ

**ಅರಕಲಗೂಡು:** ತಾಲ್ಲೂಕಿನಲ್ಲಿ ಜಲ ಜೀವನ್ ಮಿಷನ್ ಯೋಜನೆ ಕಾಮಗಾರಿ ಪ್ರಾರಂಭವಾಗಿ ಎರಡು ವರ್ಷಗಳಾದರೂ ಮುಗಿಯದೆ ತೆವಳುತ್ತಿದೆ. ಹಲವೆಡೆ ಆಗಿರುವ ಕಾಮಗಾರಿಯಲ್ಲೂ ಗುತ್ತಿಗೆದಾರರು ಗುಣಮಟ್ಟ ಕಾಪಾಡಿಲ್ಲ ಎನ್ನುವ ಆರೋಪಗಳು ಬಲವಾಗಿ ಕೇಳಿ ಬರುತ್ತಿವೆ.

ಕಳೆದ ಎರಡು ವರ್ಷಗಳ ಹಿಂದೆ ಅಂದಿನ ಶಾಸಕ ಎ.ಟಿ. ರಾಮಸ್ವಾಮಿ ಅವರು ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿದ್ದರು. ಇದುವರೆಗೂ ಕಾಮಗಾರಿ ವೇಗ ಪಡೆದುಕೊಳ್ಳದೆ ಗುತ್ತಿಗೆದಾರರ ನಿರ್ಲಕ್ಷ್ಯದಿಂದಾಗಿ ಅಲ್ಲಲ್ಲಿ ಅಪೂರ್ಣಗೊಂಡಿದೆ.

285 ಕೋಟಿ ರೂ ವೆಚ್ಚದಲ್ಲಿ ತಾಲ್ಲೂಕಿನ 36 ಗ್ರಾಪಂಗಳ ವ್ಯಾಪ್ತಿಯಲ್ಲಿ ಯೋಜನೆ ಅನುಷ್ಠಾನಕ್ಕೆ ಕ್ರಮ ಕೈಗೊಳ್ಳಲಾಗಿದೆ. ಮನೆ ಮನೆಗೆ ಶುದ್ಧ ಕುಡಿಯುವ ನೀರು ಒದಗಿಸುವ ಈ



ಯೋಜನೆಗೆ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಶೇ 50 ರಷ್ಟು ಅನುದಾನ ನೀಡುತ್ತಿವೆ. ಸರ್ಕಾರದ ಮಹತ್ವಾಕಾಂಕ್ಷೆಯ ಕುಡಿಯುವ ನೀರಿನ ಯೋಜನೆ ಕಾಮಗಾರಿ ತಾಲ್ಲೂಕಿನಲ್ಲಿ ಕುಂಟುತ್ತಿದೆ. ಗ್ರಾಮ ಪಂಚಾಯಿತಿ ವ್ಯಾಪ್ತಿಯ ಸಾಕಷ್ಟು ಹಳ್ಳಿಗಳಲ್ಲಿ ಅಪೂರ್ಣಗೊಂಡಿರುವ ಕಾಮಗಾರಿ ಮುಗಿಸದೆ ನಿರ್ಲಕ್ಷ್ಯಿಸಲಾಗಿದೆ.

ತಾಲೂಕಿನಲ್ಲಿ ಜಲ ಜೀವನ್ ಮಿಷನ್ ಯೋಜನೆಯಡಿ 309 ಕಾಮಗಾರಿಗಳಿದ್ದು ಪೈಪ್ ಲೈನ್ ಅಳವಡಿಸಿ ಟ್ಯಾಂಕ್ ನಿರ್ಮಿಸಿ

### ಅವ್ಯವಸ್ಥೆಯಿಂದ ಕೂಡಿರುವ ಕಾಮಗಾರಿ

ಕುಡಿಯುವ ನೀರಿನ ಮಹತ್ವಾಕಾಂಕ್ಷೆಯ ಯೋಜನೆ ಕಾಮಗಾರಿ ಅವ್ಯವಸ್ಥೆಯಿಂದ ಕೂಡಿದೆ. ಮದಲಾಪುರ ಗ್ರಾಮದಲ್ಲಿ ಗುತ್ತಿಗೆದಾರ ಡಿಪಿಆರ್ ಮಾರ್ಗಸೂಚಿಯಂತೆ ಕಾಮಗಾರಿ ಮುಗಿಸದೆ ಕಳಪೆ ಕಾಮಗಾರಿ ನಡೆಸಲಾಗಿದೆ. ಕೆಲವು ಮನೆಗಳಿಗೆ ನಲ್ಲಿ ಸಂಪರ್ಕವನ್ನು ರಸ್ತೆ ಮೇಲ್ಭಾಗದಲ್ಲಿ ಅಳವಡಿಸಲಾಗಿದೆ. ಗುತ್ತಿಗೆದಾರ ಕಾಮಗಾರಿ ಗುಣಮಟ್ಟ ಕಾಪಾಡುವಂತೆ ಇಂಜಿನಿಯರ್ ಸೂಕ್ತ ಕ್ರಮ ಜರುಗಿಸಬೇಕು.

- ಎಂ.ಆರ್. ರಂಗಸ್ವಾಮಿ, ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಹಾಗೂ ಹಾಲಿ ಸದಸ್ಯ, ಮಲ್ಲಿಪಟ್ಟಣ

ಬೋರ್‌ವೆಲ್ ಸಂಪರ್ಕ ಕಲ್ಪಿಸಬೇಕಿದೆ. 265 ಟ್ಯಾಂಕ್‌ಗಳನ್ನು ಸ್ಥಾಪಿಸಬೇಕಿದ್ದು 190 ಟ್ಯಾಂಕ್‌ಗಳು ಕಾಮಗಾರಿ ಆಗಿದೆ. 35ಟ್ಯಾಂಕ್‌ಗಳ ಕಾಮಗಾರಿ ಆಗಬೇಕಿದೆ. ಕಟ್ಟೇಪುರ ಸೇರಿದಂತೆ ಹಲವಾರು ಗ್ರಾಪಂ ವ್ಯಾಪ್ತಿಯಲ್ಲಿ ಶೇ. 50ರಷ್ಟು ಕಾಮಗಾರಿ ನಡೆದಿಲ್ಲ. ಕೆಲವೆಡೆ ಪೈಪ್ ಲೈನ್ ಅಳವಡಿಸಿದ್ದು ಕೊಳವೆ ಬಾವಿ ಕೊರೆದು ನೀರಿನ ಸಂಪರ್ಕ ಕಲ್ಪಿಸಬೇಕಿದೆ.

ಕಾಮಗಾರಿ ಆಗಿರುವ ಸಾಕಷ್ಟು ಹಳ್ಳಿಗಳಲ್ಲಿ ನಲ್ಲಿಗೆ ನೀರು ಹತ್ತುತ್ತಿಲ್ಲ ಎಂದು ಗ್ರಾಮಸ್ಥರು ನಲ್ಲಿಗಳಿಗೆ ಅಳವಡಿಸಿರುವ ಪೈಪುಗಳನ್ನು ಒಡೆದು ಹಾಕಿದ್ದಾರೆ. ಪೈಪ್ ಒಡೆದು ನೀರು ಪೋಲಾಗುತ್ತಿದ್ದ ಗ್ರಾಮಗಳಲ್ಲಿ ಮರು ಕಾಮಗಾರಿ ಕೈಗೆತ್ತಿಕೊಳ್ಳಲಾಗಿದೆ. ಸಂತೆಮರೂರು ಗ್ರಾಪಂ ವ್ಯಾಪ್ತಿಯ ಶಣವಿನಕುಪ್ಪೆ ಗ್ರಾಮದಲ್ಲಿ ಪೈಪ್ ಲೈನ್ ಕಾಮಗಾರಿ ಅಪೂರ್ಣಗೊಂಡಿದ್ದು ಕೆಲವು ಬೀದಿಗಳಲ್ಲಿ ಕಾಮಗಾರಿ ಮುಗಿಸಲಾಗಿದೆ.

ಜಲ ಜೀವನ್ ಮಿಷನ್ ಯೋಜನೆ ಕಾಮಗಾರಿ ಪ್ರಗತಿ ಹಂತದಲ್ಲಿದ್ದು ಅಪೂರ್ಣವಾಗಿರುವ ಉಳಿಕೆ ಕಾಮಗಾರಿಗಳನ್ನು ತ್ವರಿತವಾಗಿ ಪೂರ್ಣಗೊಳಿಸುವಂತೆ ಗುತ್ತಿಗೆದಾರರಿಗೆ ನೋಟೀಸ್ ನೀಡಿ ಟ್ಯಾಂಕ್‌ಗಳ ಸ್ಥಾಪನೆಗೆ ಕ್ರಮ ಕೈಗೊಳ್ಳಲಾಗುವುದು. ಇನ್ನೊಂದು ತಿಂಗಳಲ್ಲಿ ಶೇ. 72ರಿಂದ 80ರಷ್ಟು ಕಾಮಗಾರಿ ಮುಗಿಯಲಿದೆ.

-ನವೀನ್, ಜೆಜೆಎಂ ಸಹಾಯಕ ಕಾರ್ಯಪಾಲಕ ಇಂಜಿನೀಯರ್, ಅರಕಲಗೂಡು

ಹಳೆಯ ಪೈಪ್‌ಲೈನ್ ಮೂಲಕವೇ ನೀರು ಸರಬರಾಜು ಮಾಡಲಾಗುತ್ತಿದ್ದು ಹೊಸ ಪೈಪ್‌ಲೈನ್ ಸಂಪರ್ಕ ಕಲ್ಪಿಸದೆ ನಿರ್ಲಕ್ಷ್ಯಿಸಲಾಗಿದೆ ಎನ್ನುತ್ತಾರೆ ಗ್ರಾಪಂ ಸದಸ್ಯ ಸಂತೋಷ್.

ಜಲ ಜೀವನ್ ಮಿಷನ್ ಯೋಜನೆಯಡಿ ಕೈಗೊಂಡಿರುವ ಕಾಮಗಾರಿಗಳು ಅಧ್ವಾನವಾಗಿದೆ. ಕೆಲವು ಕಡೆ ಕಾಮಗಾರಿಯೇ ಆಗಿಲ್ಲ. ಕೆಲವೆಡೆ ಪೈಪ್ ಲೈನ್ ಅಳವಡಿಸಿದ್ದು ನೀರಿನ ಸಂಪರ್ಕ ಕಲ್ಪಿಸಿಲ್ಲ. ಕಾಮಗಾರಿ ಅಪೂರ್ಣವಾಗಿರುವ ಸ್ಥಳಗಳಲ್ಲಿ ಗುತ್ತಿಗೆದಾರರಿಗೆ ನೋಟೀಸ್ ನೀಡಿ ತುರ್ತು ಕ್ರಮವನ್ನು ವಹಿಸಬೇಕು. ಯಾವುದೇ ಗ್ರಾಮದಲ್ಲಿ ಕುಡಿಯುವ ನೀರಿನ ಕೊರತೆ ಎದುರಾಗದಂತೆ ಯೋಜನೆ ಜಾರಿಯಾಗೊಳಿಸಿ ಶುದ್ಧ ನೀರು ನೀಡಬೇಕು. ಕಾಮಗಾರಿ ಪೂರ್ಣಗೊಳಿಸದಿದ್ದರೆ ಕುಡಿಯುವ ನೀರಿಗೆ ತೊಂದರೆ ಅನುಭವಿಸುವುದು ತಪ್ಪುವುದಿಲ್ಲ. ಈ ಕುರಿತು ಇಂಜಿನಿಯರ್ ಮತ್ತು ಕ್ಷೇತ್ರದ ಜನಪ್ರತಿನಿಧಿ ಗಮನ ಹರಿಸಬೇಕು ಎನ್ನುತ್ತಾರೆ ಕಳ್ಳಿಮುದ್ದನಹಳ್ಳಿ ಲೋಕೇಶ್.



ಅರೇಹಳ್ಳಿ: ಹಾಸನದಲ್ಲಿ ನಡೆದ 14 ವರ್ಷದೊಳಗಿನ ವಿದ್ಯಾರ್ಥಿಗಳ ಜಿಲ್ಲಾ ಮಟ್ಟದ ಕ್ರೀಡಾಕೂಟದಲ್ಲಿ ಬೇಲೂರು ತಾಲ್ಲೂಕು ಅರೇಹಳ್ಳಿಯ ಮಲ್ನಾಡ್ ಶಾಲೆಯ ವಿದ್ಯಾರ್ಥಿನಿ ಶ್ರೀಜಾ ಮೆನನ್ ಉದ್ದ ಜಿಗಿತ ಹಾಗು ಎತ್ತರ ಜಿಗಿತದಲ್ಲಿ ದ್ವಿತೀಯ ಸ್ಥಾನ ಪಡೆದು ರಾಜ್ಯಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

## ಮಳೆಯಿಂದ ಭಾರತ- ಆಸ್ಟ್ರೇಲಿಯಾ ಪಂದ್ಯ ರದ್ದು

**ಕ್ಯಾನ್‌ಬೆರಾ:** ಭಾರತ ಹಾಗೂ ಆಸ್ಟ್ರೇಲಿಯಾ ನಡುವಿನ ಐದು ಪಂದ್ಯಗಳ ಟಿ-20 ಅಂತರರಾಷ್ಟ್ರೀಯ ಸರಣಿಯ ಮೊದಲ ಪಂದ್ಯ ಮಳೆಯಿಂದಾಗಿ ರದ್ದಾಗಿದೆ.

ಪಂದ್ಯ ರದ್ದುಗೊಳ್ಳುವುದಕ್ಕೆ ಮೊದಲು, ಟಾಸ್ ಸೋತು ಮೊದಲು ಬ್ಯಾಟಿಂಗ್ ನಡೆಸಿದ ಭಾರತ ತಂಡಕ್ಕೆ ಸ್ಫೋಟಕ ಆರಂಭ ಸಿಕ್ಕಿತು. ಆರಂಭಿಕರಾದ ಅಭಿಷೇಕ್ ಶರ್ಮಾ ಹಾಗೂ ಶುಭಮನ್ ಗಿಲ್ ಮೊದಲ ವಿಕೆಟ್‌ಗೆ 35 ರನ್‌ಗಳ ಜೊತೆಯಾಟ ನಡೆಸಿದರು. ಈ ವೇಳೆ 19 ರನ್ ಗಳಿಸಿದ್ದ ಅಭಿಷೇಕ್ ವಿಕೆಟ್ ಒಪ್ಪಿಸಿ ಪೆವಿಲಿಯನ್ ಸೇರಿಕೊಂಡರು.

ನಾಯಕ ಸೂರ್ಯಕುಮಾರ್ ಯಾದವ್ ಇಂದಿನ ಪಂದ್ಯದಲ್ಲಿ ಸ್ಫೋಟಕ ಬ್ಯಾಟಿಂಗ್ ನಡೆಸಿದರು. ಅವರು ಪಂದ್ಯ ಮಳೆಯಿಂದ ರದ್ದಾಗುವುದಕ್ಕೆ ಮೊದಲು 24 ಎಸೆತಗಳಲ್ಲಿ 3 ಬೌಂಡರಿ ಹಾಗೂ 2 ಸಿಕ್ಸರ್ ಸಹಿತ ಅಜೇಯ 39 ರನ್ ಗಳಿಸಿದರು.

# ವಿದ್ಯಾರ್ಥಿ ನಿಲಯಗಳಲ್ಲಿ ಕಳಪೆ ಆಹಾರ ವಿತರಣೆ

## ಪ.ಪಂ. ಸಾಮಾನ್ಯ ಸಭೆಯಲ್ಲಿ ಆಡಳಿತಾಧಿಕಾರಿ ಬಾಬು | ತಪ್ಪಿತಸ್ಥರ ವಿರುದ್ಧ ವರದಿಗೆ ಸೂಚನೆ

• ಪ್ರಜೋದಯ ವರದಿ



**ಅರಕಲಗೂಡು:** ಸರ್ಕಾರಿ ಶಾಲಾ ಕಾಲೇಜುಗಳ ವಿದ್ಯಾರ್ಥಿ ನಿಲಯಗಳಲ್ಲಿ ಮಕ್ಕಳಿಗೆ ನೀಡುವ ಆಹಾರ ಸಂಪೂರ್ಣ ಕಳಪೆಯಾಗಿದೆ, ಕೆಲವು ಹಾಸ್ಟೆಲ್‌ಗಳಿಗ ಭೇಟಿ ನೀಡಿದಾಗ ಈ ವಿಚಾರ ನನ್ನ ಗಮನಕ್ಕೆ ಬಂದಿದೆ. ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿ ತಪ್ಪಿತಸ್ಥರ ವಿರುದ್ಧ ಮೇಲಾಧಿಕಾರಿಗಳಿಗೆ ವರದಿ ಸಲ್ಲಿಸಬೇಕೆಂದು ತಾಲ್ಲೂಕು ಪಂಚಾಯಿತಿ ಆಡಳಿತಾಧಿಕಾರಿ ಎಂ.ಬಾಬು ಅವರು ಹೇಳಿದರು.

ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ಬುಧವಾರ ನಡೆದ ಸಾಮಾನ್ಯಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಕೆಲವು ವಿದ್ಯಾರ್ಥಿ ನಿಲಯಗಳಿಗೆ ಭೇಟಿ ನೀಡಿ ಮಕ್ಕಳ ತಿಂಡಿ, ಊಟವನ್ನು ಸೇವನೆ ಮಾಡಿದಾಗ ಕೇವಲ ಒಂದೆರಡು ತರಕಾರಿಗಳನ್ನು ಬಳಕೆ ಮಾಡಿ ಸಾಂಬಾರು ಮಾಡಿರುವುದು ಕಂಡು ಬಂದಿತ್ತು. ಕೇವಲ ಕುಂಬಳ ಕಾಯಿ, ಮಂಗ ಳೂರು ಸೌತೆಕಾಯಿ ಮಾತ್ರವಿತ್ತು. ಸ್ಥಳೀಯ ವಾಗಿ ದೊರೆಯುವ ಹಸಿ ತರಕಾರಿ, ಕಾಳು, ಸೊಪ್ಪು, ಬಿನ್ಸ್ ಬಳಕೆಯಾಗುತ್ತಿಲ್ಲ, ಇನ್ನೂ ಬೆಳಗ್ಗಿನ ತಿಂಡಿಯ ಕಥೆ ಹೇಳತೀರದಾಗಿದೆ. ನಮ್ಮ ಸರ್ಕಾರಿ ಶಾಲೆ, ಕಾಲೇಜು, ವಿದ್ಯಾರ್ಥಿ ನಿಲಯಗಳಲ್ಲಿ ಗ್ರಾಮೀಣ ಭಾಗದ ಬಡಮಕ್ಕಳೇ ವಾಸಿಸುತ್ತಿದ್ದಾರೆ. ಅವರಿಗೆ ಪೋಷಕಾಂಶಯುಕ್ತ ಆಹಾರ ಪದಾರ್ಥ ಕೊಡದಿದ್ದರೇ ಆರೋಗ್ಯ ವಂತರಾಗಿ ಶಿಕ್ಷಣ ಪಡೆಯಲು ಹೇಗೆ ಸಾಧ್ಯ. ಪ್ರಾಥಮಿಕ, ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಹೆಚ್ಚಿನದಾಗಿ ಪೋಷಕಾಂಶಯುಕ್ತ ಆಹಾರ ಅತ್ಯವಶ್ಯಕವಾಗಿದೆ ಎಂದರು.

ಸರ್ಕಾರದ ನಿಯಮಾನುಸಾರ ವಿದ್ಯಾರ್ಥಿ ನಿಲಯಗಳಿಗೆ ತರಕಾರಿ ವಿತರಣೆ ಮಾಡದ ಏಜೆನ್ಸಿಯವರನ್ನು ಕೂಡಲೇ ಬದಲಾಯಿಸ ಬೇಕು. ನಿಗದಿತ ತರಕಾರಿ ನೀಡಿರುವ ಕುರಿತು ವಿದ್ಯಾರ್ಥಿ ನಿಲಯದ ಮೇಲ್ವಿಚಾರಕರಿಂದ ಲಿಖಿತ ಮಾಹಿತಿ ಪಡೆದುಕೊಳ್ಳಬೇಕು. ಪ್ರಮುಖ ವಾಗಿ ಅಡುಗೆ ಸಿಬ್ಬಂದಿ ಗುಣಮಟ್ಟದಿಂದ ಆಹಾರ ತಯಾರಿಕೆ ಮಾಡುವ ಕುರಿತು ಎಚ್ಚರಿಕೆ ವಹಿಸಬೇಕು ಎಂದು ಸಮಾಜ ಕಲ್ಯಾಣ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

**ವಿದ್ಯಾರ್ಥಿ ವೇತನ ನೀಡಿಲ್ಲ**

ತಾಲ್ಲೂಕಿನಲ್ಲಿ ಕಳೆದ ಮತ್ತು ಈ ಸಾಲಿನ ವಿದ್ಯಾರ್ಥಿ ವೇತನ ನೀಡಿಲ್ಲದಿರುವ ಬಗ್ಗೆ ಮಾಹಿತಿ ಪಡೆದುಕೊಂಡ ಅವರು, ಸರ್ಕಾರದ ಮಟ್ಟದಲ್ಲಿ ಅರ್ಹ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ಬಿಡುಗಡೆಯಾಗುತ್ತಿದೆ. ಆದರೆ ಸ್ಥಳೀಯ ಮಟ್ಟದಲ್ಲಿ ವಿಳಂಬ ಏಕೆ ಆಗುತ್ತಿದೆ ಎಂದು ಅಧಿಕಾರಿ ಗಳನ್ನು ಪ್ರಶ್ನಿಸಿದರು. ಆಯಾ ಸಾಲಿನ ವಿದ್ಯಾರ್ಥಿ ವೇತನ ಹಾಗು ಇತರೆ ಪ್ರತಿಭಾ ಪುರಸ್ಕಾರದ ಗೌರವಧನ ನಿಗದಿತ ಅವಧಿಯಲ್ಲಿ ಬಿಡುಗಡೆ ಮಾಡುವ ಕುರಿತು ಗಮನ ಹರಿಸಬೇಕೆಂದು ತಿಳಿಸಿದರು.

**ಸಮೀಕ್ಷೆ ಶೇ.89.31**

ರಾಜ್ಯ ಸರ್ಕಾರ ಆರಂಭಿಸಿರುವ ಆರ್ಥಿಕ ಮತ್ತು ಸಾಮಾಜಿಕ ಸಮೀಕ್ಷೆ ಕಾರ್ಯ ಶೇ. 89.31ರಷ್ಟು ನಡೆದಿರುವುದು ತೃಪ್ತಿದಾಯಕ ವಾಗಿಲ್ಲ, ಹಾಸನ ಸೇರಿ ಇತರೆ ತಾಲ್ಲೂಕುಗಳು ಶೇ. 90ರಿಂದ ಶೇ.94ರಷ್ಟು ಸಾಧನೆ ಮಾಡಿವೆ. ನಿಗದಿತ ಅವಧಿಯೊಳಗೆ ನಮ್ಮ ತಾಲ್ಲೂಕು ಕೂಡ ಶೇ.100ರಷ್ಟು ಗುರಿ ಮುಟ್ಟಬೇಕೆಂದು ಬಿಸಿಎಂ ಅಧಿಕಾರಿಗೆ ಸೂಚನೆ ನೀಡಿದರು. ಸಮೀಕ್ಷೆ ಕಾರ್ಯದಿಂದ ಎಲ್ಲಾ ಶಿಕ್ಷಕರು ಬಿಡುಗಡೆಗೊಂಡಿ ದ್ದಾರೆ. ಅದರಿಂದ ಕಾರ್ಯಕ್ಕೆ ಸ್ವಲ್ಪಮಟ್ಟಿಗೆ ಹಿನ್ನ ಡೆಯಾಗಿದೆ. ಗ್ರಾಮ ಪಂಚಾಯಿತಿ ಮಟ್ಟದ ಅಧಿಕಾರಿಗಳಿಂದ ಸಮೀಕ್ಷೆ ಮುಂದುವರಿದಿದೆ. ತಾಲ್ಲೂಕಿನಲ್ಲಿ ಒಟ್ಟು 55.904 ಮನೆಗಳಿದ್ದು, 2,13,751 ಜನಸಂಖ್ಯೆ ಇದೆ. ಈ ಪೈಕಿ ಇದುವರೆಗೆ 54,648 ಮನೆಗಳಿಂದ 1,90,903 ಮಂದಿಯ ಸಮೀಕ್ಷೆ ಪೂರ್ಣಗೊಂಡಿದೆ. ನಿಗದಿತ ಅವಧಿ ಯೊಳಗೆ ಸಮೀಕ್ಷೆ ಕಾರ್ಯ ಪೂರ್ಣಗೊಳ್ಳಿಸಲಾಗುವುದೆಂದು ಬಿಸಿಎಂ ಇಲಾಖೆ ಅಧಿಕಾರಿ ಸಭೆಗೆ ಮಾಹಿತಿ ನೀಡಿದರು.

**ರೈತರಿಂದ ಬೆಳೆ ವಿಮೆ ಮಾಡಿಸಿ**

ಜಿಲ್ಲೆಯ ಬೇರೆ ತಾಲ್ಲೂಕುಗಳಿಗೆ ಹೋಲಿಸಿ ದರೆ ಅರಕಲಗೂಡು ತಾಲ್ಲೂಕಿನಲ್ಲಿ ಬೆಳೆ ವಿಮೆ ಅಷ್ಟೊಂದು ತೃಪ್ತಿದಾಯಕವಾಗಿಲ್ಲ, ಇತ್ತೀಚೆಗೆ ಸುರಿದ ಮಳೆಯಿಂದ ರೈತರ ಬೆಳೆಗಳು ಹಾನಿ ಗೊಳಗಾಗಿವೆ. ಈ ಹಂತದಲ್ಲಿ ವಿಮೆ ಮಾಡಿಸಿ ದ್ದರೇ ಸೂಕ್ತ ಪರಿಹಾರ ದೊರೆಯುತ್ತಿತ್ತು. ಮುಂಗಾರು, ಹಿಂಗಾರು ಬೆಳೆಗಳಿಗೆ ನಿಗದಿಯಾ ಗಿರುವ ಬೆಳೆ ವಿಮೆ ಮಾಡಿಸಲು ಕೃಷಿ ಇಲಾಖೆ ಹೆಚ್ಚಿನ ಗಮನ ಹರಿಸಬೇಕಿದೆ. ಈ ನಿಟ್ಟಿನಲ್ಲಿ ಇಂದಿನಿಂದಲೇ ಗಮನಹರಿಸಿ ಎಂದು ಎಂ.ಬಾಬು ಕೃಷಿ ಅಧಿಕಾರಿಗೆ ಸಲಹೆ ಮಾಡಿದರು.

ತಾಲ್ಲೂಕಿನಲ್ಲಿ 47 ಸಾವಿರ ಹೆಕ್ಟೇರ್ ಕೃಷಿ ಪ್ರದೇಶವಿದ್ದು, 41 ಸಾವಿರ ಹೆಕ್ಟೇರ್‌ನಲ್ಲಿ ಬೆಳೆ ಯನ್ನು ಕೈಗೊಳ್ಳಲಾಗಿದೆ. ಕಳೆದ ವರ್ಷ ಬೆಳೆ ವಿಮೆ ಮಾಡಿಸಿದ ರೈತರಿಗೆ ನೇರವಾಗಿ ಬೆಳೆ ವಿಮೆ ಅವರ ಬ್ಯಾಂಕ್ ಖಾತೆಗೆ ಜಮಾ ಆಗಿದೆ. ಈ ಸಾಲಿನಲ್ಲಿ 216 ಮಂದಿ ಬೆಳೆ ವಿಮೆ ಮಾಡಿಸಿದ್ದಾರೆ. ಕಳೆದ ವಾರ ಬಿದ್ದ ಮಳೆಯಿಂದ 10 ಹೆಕ್ಟೇರ್‌ನಲ್ಲಿ ನೀರಾವರಿ ಪ್ರದೇಶದಲ್ಲಿನ ಭತ್ತ ಹಾನಿಯಾಗಿದೆ. ಈ ಬಗ್ಗೆ ವರದಿ ಸಲ್ಲಿಸಲಾಗು ವುದು ಎಂದು ಕೃಷಿ ಅಧಿಕಾರಿ ಕವಿತಾ ಮಾಹಿತಿ ನೀಡಿದರು.

**ಎಕೋ ತಪಾಸಣೆಗೆ ಒತ್ತು ನೀಡಿ**

ಇತ್ತೀಚೆಗೆ ಹೃದಯಾಘಾತ ಪ್ರಕರಣಗಳು ಉಲ್ಬಣಗೊಳ್ಳುತ್ತಿದ್ದು, ಆರೋಗ್ಯ ಇಲಾಖೆ ವತಿಯಿಂದ ಹೆಚ್ಚಿನದಾಗಿ ಆರೋಗ್ಯ ತಪಾಸಣಾ ಶಿಬಿರಗಳನ್ನು ಆಯೋಜನೆ ಮಾಡಬೇಕಿದೆ. ಪ್ರಮುಖವಾಗಿ ಹೃದಯ ತಪಾಸಣಾ ಶಿಬಿರ ಆಯೋಜನೆ ಮಾಡುವ ವೇಳೆ ಇಸಿಜಿಯೊಂದಿಗೆ ಎಕೋ ತಪಾಸಣೆಗೆ ಹೆಚ್ಚು ಒತ್ತು ನೀಡಬೇಕು. ಅದರಿಂದ ಹೃದಯ ತೊಂದರೆ ಕಂಡುಬಂದರೇ ತ್ವರಿತವಾಗಿ ಚಿಕಿತ್ಸೆ ಕೊಡಲು ಅನುಕೂಲವಾಗ ುತ್ತದೆ. ಈ ಬಗ್ಗೆ ಹೆಚ್ಚಿನ ಗಮನಹರಿಸಬೇಕೆಂದು ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಪುಷ್ಪಲತಾ ಮತ್ತು ಸಾರ್ವಜನಿಕ ಆಸ್ಪತ್ರೆ ಆಡಳಿತಾಧಿಕಾರಿ ಡಾ.ಸ್ವಾಮಿಗೌಡ ಅವರಿಗೆ ಸೂಚನೆ ನೀಡಿದರು.

**ವಲಸೆ ಕಾರ್ಮಿಕರ ಸಮೀಕ್ಷೆ ಕೈಗೊಳ್ಳಿ**

ತಾಲ್ಲೂಕಿನಲ್ಲಿ ಸಾವಿರಾರು ಸಂಖ್ಯೆಯಲ್ಲಿ ಹೊರ ರಾಜ್ಯದಿಂದ ವಲಸೆ ಕಾರ್ಮಿಕರು ನೆಲ ಸಿದ್ದು, ಈ ಬಗ್ಗೆ ಸಮಿತಿ ರಚನೆ ಮಾಡಿ ಸಮೀಕ್ಷೆ ಕೈಗೊಳ್ಳುವುದು ಸೂಕ್ತ ಎಂದು ತಾಲ್ಲೂಕು ಪಂಚಾಯಿತಿ ಆಡಳಿತಾಧಿಕಾರಿ ಬಾಬು ಸಭೆ ಯಲ್ಲಿ ಪ್ರಸ್ತಾಪಿಸಿದರು.

ಅಡಿಕೆ ಕಣ, ತೋಟದ ಕೆಲಸ ರೈತ ಕೃಷಿ ಜಮೀನಿನ ಕೆಲಸ, ಗಾರೆ ಕೆಲಸ ಹೀಗೆ ಹಲವು ಕೆಲಸಗಳಲ್ಲಿ ವಲಸೆ ಕಾರ್ಮಿಕರು ತೊಡಗಿ ಕೊಂಡಿರುವ ಬಗ್ಗೆ ವರದಿಯಾಗಿದೆ. ಅಲ್ಲದೆ ಮೂಲ ಸೌಕರ್ಯವಿಲ್ಲದ ಕಡೆ, ಅಪ್ರಾಪ್ತ ಮ ಕ್ಕಳು ಕೂಡ ಇವರೊಂದಿಗೆ ನೆಲೆಸಿದ್ದಾರೆ. ಕೆಲಸಕ್ಕೆ ಇಟ್ಟುಕೊಂಡಿರುವ ಮಾಲೀಕರೊಂದಿಗೆ ಸಮಾ ಲೋಚನೆ ನಡೆಸುವುದು ಕೂಡ ಅವಶ್ಯವಾಗಿದೆ. ಸಮಿತಿ ರಚನೆ ಮಾಡಿಕೊಂಡು ಕಾರ್ಯ ನಿರ್ವಹಿಸಿ ಎಂದು ಹೇಳಿದರು. ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹ ಣಾಧಿಕಾರಿ ಶ್ರೀನಿವಾಸ್ ಹಾಗು ಇತರೆ ಅಧಿಕಾರಿಗಳಿದ್ದರು.

### ಮನವಿ ಸ್ವೀಕರಿಸದ ಡಿ.ಸಿ. ವಿರುದ್ಧ ವಕೀಲರ ಆಕ್ರೋಶ

» ಮೊದಲನೇ ಪುಟದಿಂದ

ವ್ಯಕ್ತಪಡಿಸಲು ಬಂದಿದ್ದೆವು. ಆದರೆ, ಜಿಲ್ಲಾಧಿಕಾರಿಗಳ ವರ್ತನೆ ನಮ್ಮಲ್ಲಿ ನಿರಾಸೆ ಮೂಡಿಸಿದೆ. ವಕೀಲರನ್ನೇ ಹೀಗೆ ನಡೆಸಿಕೊಂಡರೆ ಸಾಮಾನ್ಯ ಜನರ ಗತಿ ಏನೆಂದು ಪ್ರಶ್ನಿಸಿದರು.

**ಪರ-ವಿರೋಧ ವಾದ**

ಜಿಲ್ಲಾಧಿಕಾರಿ ಒಂದು ನಿಮಿಷ ಮನವಿ ಪತ್ರವನ್ನು ಸ್ವೀಕರಿಸಿ ತೆರಳ ಬಹುದಿತ್ತು. ಪ್ರತಿಭಟನಾಕಾರರು ಕೂಡ ಎಡಿಸಿಗೆ ಮನವಿ ಸಲ್ಲಿಸಬಹುದಾಗಿತ್ತು ಎಂಬ ವಾದವೂ ಕೇಳಿಬರುತ್ತಿದೆ. ರಸ್ತೆಯಲ್ಲಿ ವಾಹನ ಸಂಚಾರ ತಡೆದು ಪ್ರತಿಭಟನೆ ನಡೆಸುತ್ತಿದ್ದ ಸಂದರ್ಭದಲ್ಲಿ ಪೊಲೀಸರು ಪ್ರತಿಭಟನಾಕಾರರನ್ನು ಜಿಲ್ಲಾಧಿಕಾರಿ ಮನವಿ ಪತ್ರ ಸ್ವೀಕರಿಸುತ್ತಾರೆ ಬನ್ನಿ ಎಂದು ಕರೆದರೂ ಅವರು ಹೋಗಲಿಲ್ಲ, ಜಿಲ್ಲಾಧಿಕಾರಿ ಸ್ಥಳಕ್ಕೆ ಬಂದು ಮನವಿ ತೆಗೆದುಕೊಂಡು ಹೋಗಲಿ ಎಂದು ಪಟ ಹಿಡಿದರು. ಆದರೆ, ರಸ್ತೆಗೆ ಹೋಗಿ ಮನವಿ ಸ್ವೀಕರಿಸಲಿಲ್ಲ, ಇಬ್ಬರು ಪ್ರತಿಷ್ಠೆಯಾಗಿ ತೆಗೆದುಕೊಂಡಿದ್ದಾರೆಂದು ಸಾರ್ವಜನಿಕ ವಲಯದಲ್ಲಿ ವ್ಯಾಪಕ ಚರ್ಚೆಗೆ ಗ್ರಾಸವಾಗಿದೆ.

### ಜ್ಞಾನಪ್ರಕಾಶ ಸ್ವಾಮೀಜಿ ವಿರುದ್ಧ ವಕೀಲರ ಪ್ರತಿಭಟನೆ

**ಹಾಸನ:** ನ್ಯಾಯಾಧೀಶರು ಹಾಗು ನ್ಯಾಯಾಂಗ ವ್ಯವಸ್ಥೆ ಬಗ್ಗೆ ಅವಹೇಳನಕಾರಿಯಾಗಿ ಮಾತನಾಡಿದ ಮೈಸೂರಿನ ಉರಿಲಿಂಗ ಪೆದ್ದಿಮಠದ ಜ್ಞಾನಪ್ರಕಾಶ ಸ್ವಾಮೀಜಿ ಅವರ ನಿಲುವು ಖಂಡಿಸಿ ಜಿಲ್ಲಾ ವಕೀಲರ ಸಂಘದಿಂದ ಪ್ರತಿಭಟನೆ ನಡೆಸಲಾಯಿತು.

ಬುಧವಾರ ಬೆಳಿಗ್ಗೆ ಕಲಾಪದಿಂದ ಹೊರಗುಳಿದ ವಕೀಲರು ಆಕ್ರೋಶ ವ್ಯಕ್ತ ಪಡಿಸಿ ಜಿಲ್ಲಾಧಿಕಾರಿ ಕಚೇರಿವರೆಗೆ ಮೆರವಣಿಗೆ ನಡೆಸಿದರು. ನ್ಯಾಯಾಧೀಶರು ಇದೇ ರೀತಿ ಆದೇಶ ನೀಡಬೇಕೆಂದು ಹೇಳಿರುವುದು, ನ್ಯಾಯಾಲಯದ ಬಗ್ಗೆ ತುಚ್ಛ ವಾಗಿ ಹಾಗು ಸಮಾಜದ ಸ್ವಾಸ್ಥ್ಯ ಕದಡುವಂತ ಮಾತನಾಡಿರುವುದು ಸರಿ ಯಲ್ಲ, ಸ್ವಾಮೀಜಿ ಅವರ ಈ ಹೇಳಿಕೆ ಸಾಮಾಜಿಕ ಮಾಧ್ಯಮ ಸೇರಿ ಎಲ್ಲೆಡೆ ಹರಿ ದಾಡುತ್ತಿದೆ. ಇದರಿಂದ ಸಮಾಜದಲ್ಲಿ ನ್ಯಾಯಾಂಗ ಬಗ್ಗೆ ಆಧಾರವಿಲ್ಲದ ಕೆಟ್ಟ ಅಭಿಪ್ರಾಯ ಮೂಡುವಂತೆ ಮಾಡಿದ್ದಾರೆಂದು ಅಸಮಾಧಾನ ಹೊರ ಹಾಕಿದರು. ಸ್ವಾಮೀಜಿ ಅವರ ಹೇಳಿಕೆ ನ್ಯಾಯಾಂಗ ನಿಂದನೆಯಾಗಿದ್ದು, ಪ್ರಚೋದನಾ ಕಾರಿ ಭಾಷಣ ಆಗಿದೆ. ಆದ್ದರಿಂದ ಇಂದು ತುರ್ತು ಸಾಮಾನ್ಯ ಸಭೆ ಕರೆಯ ಲಾಗಿತ್ತು. ಎಲ್ಲರೂ ಸ್ವಾಮೀಜಿ ಅವರ ಹೇಳಿಕೆ ಒಕ್ಕೊರಲಿನಿಂದ ಖಂಡಿಸಿದರು. ಆದ್ದರಿಂದ ನಮ್ಮ ಮನವಿಯನ್ನು ಸರ್ಕಾರದ ಗಮನಕ್ಕೆ ತಂದು ಸ್ವಾಮೀಜಿ ವಿರುದ್ಧ ಕಾನೂನು ಕ್ರಮ ಜರುಗಿಸಬೇಕೆಂದು ಒತ್ತಾಯಿಸಿದರು.

ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಕಾರ್ಲೆ ಮೊಗಣ್ಣಗೌಡ, ಪ್ರಧಾನ ಕಾರ್ಯದರ್ಶಿ ಹೆಚ್.ಆರ್.ಹೊಂಬೇಶ್, ಖಜಾಂಚಿ ಜಿ.ಎನ್.ಸುಗುಣ, ಉಪಾಧ್ಯಕ್ಷ ಎಂ.ಟಿ.ತಿಮ್ಮೇಗೌಡ, ಜಂಟಿ ಕಾರ್ಯದರ್ಶಿ ರಘು, ವಕೀಲರಾದ ಚನ್ನಂಗಿಹಳ್ಳಿ ಶ್ರೀಕಾಂತ್ ಮೊದಲಾದವರಿದ್ದರು.

## ಕಾನೂನು ದುರ್ಬಳಕೆ ಘೋರ ಅಪರಾಧ




• ಪ್ರಜೋದಯ ವರದಿ

**ಹಾಸನ:** ದಿಢೀರ್ ಶ್ರೀಮಂತರಾಗ ಬೇಕೆಂದು ಕಾನೂನು ದುರ್ಬಳಕೆ ಮಾಡಿಕೊಳ್ಳುವುದು ಘೋರ ಅಪರಾಧ ವೆಂದು ಲೋಕಾಯುಕ್ತ ಡಿವೈಎಸ್‌ಪಿ ಸುರೇಶ್ ಅವರು ಹೇಳಿದರು.

ನಗರದ ಮಲೆನಾಡು ತಾಂತ್ರಿಕ ಕಾಲೇಜು ಸಭಾಂಗಣದಲ್ಲಿ ಬುಧವಾರ ಕರ್ನಾಟಕ ಲೋಕಾ ಯುಕ್ತದಿಂದ ಏರ್ಪಡಿಸಿದ್ದ ಜಾಗೃತಿ ಅರಿವು ಸಪ್ತಾಹ ಉದ್ಘಾಟಿಸಿ ಮಾತನಾಡಿ, 1984ರಲ್ಲಿ ಕರ್ನಾಟಕ ಲೋಕಾಯುಕ್ತ ಪೊಲೀಸ್ ಇಲಾಖೆಆರಂಭವಾಯಿತು. ಯಾವುದೇ ರೀತಿಯಲ್ಲಿ ಲಂಚ ಪಡೆ ಯುವುದು ಖಂಡನೀಯ. ಲಂಚ ಪಡೆಯದೆ ಕೆಲಸ ನಿರ್ವಹಿಸುವುದು ಅಧಿಕಾರಿ, ಚುನಾ ಯಿತ ಪ್ರತಿನಿಧಿಗಳ ಕರ್ತವ್ಯವೆಂದರು.

ಲಂಚ ಮುಕ್ತ ಸಮಾಜ ನಿರ್ಮಾಣ ಲೋಕಾಯುಕ್ತ ಸಂಸ್ಥೆಯ ಗುರಿಯಾ ಗಿದೆ. ಆಸೆ, ದುರಾಸೆಗೆ ಬಲಿಯಾಗ ಬಾರದು. ಸರ್ಕಾರದ ಕೆಲಸ ಮಾಡಿ ಕೊಡಲು ಯಾರಾದರೂ ಲಂಚ ಕೇಳಿ ದರೆ ಸಾರ್ವಜನಿಕರು ಹಿಂಜರಿಕೆ ಇಲ್ಲದೆ ದೂರು ನೀಡಬಹುದು. ದೂರುದಾರರ ಮಾಹಿತಿ ಯನ್ನು ಗೌಪ್ಯವಾಗಿಡಲಾಗು ತ್ತದೆ. ಜೊತೆಗೆ ತಪ್ಪಿತಸ್ಥರನ್ನು ಕಾನೂನು ಪ್ರಕಾರ ಶಿಕ್ಷೆಗೆ ಗುರಿಪಡಿಸಲಾಗುತ್ತ ದೆಂದರು.

ಪ್ರಭಾರ ಪ್ರಾಂಶುಪಾಲ ಡಾ.ಹೆಚ್. ಎನ್.ನರಸಿಂಹನ್ ಅಧ್ಯಕ್ಷತೆ ವಹಿಸಿ ದ್ದರು. ವಿದ್ಯಾರ್ಥಿ ಕ್ಷೇಮಾಧಿಕಾರಿ ಡಾ. ಇಂದಿರಾ ಬಹದ್ದೂರ್, ಎನ್‌ಎಸ್‌ಎಸ್ ಅಧಿಕಾರಿ ಡಾ.ವಿಜಯ್ ಕುಮಾರ್, ರಿಜಿಸ್ಟ್ರಾರ್ ಕುಮುದ ಇತರರಿದ್ದರು.

## ಭಾರತೀಯ ಸಂಸ್ಕೃತಿಗೆ ವಿಶ್ವದ ಮನ್ನಣೆ: ಆದಿಚುಂಚನಗಿರಿ ಶ್ರೀ

• ಪ್ರಜೋದಯ ವರದಿ

**ಚನ್ನರಾಯಪಟ್ಟಣ:** ಭಾರತ ದೇಶ ಧರ್ಮದ ತಳಹದಿಯ ಮೇಲೆ ನಿಂತಿದ್ದು ಇಡೀ ವಿಶ್ವವೇ ಇಲ್ಲಿನ ಸಂಸ್ಕೃತಿ ಧರ್ಮಕ್ಕೆ ಹೆಚ್ಚು ಗೌರವ ನೀಡುತ್ತಿದೆಂದು ಆದಿಚುಂಚನಗಿರಿ ಪೀಠಾಧ್ಯ ಕ್ಷರಾದ ಶ್ರೀ ಡಾ.ನಿರ್ಮಲಾನಂದನಾಥ ಸ್ವಾಮೀಜಿ ಅವರು ತಿಳಿಸಿದರು.

ತಾಲ್ಲೂಕಿನ ವಳಗೇರಹಳ್ಳಿ ಗ್ರಾಮದ ಶ್ರೀ ವೈದ್ಯನಾಥೇಶ್ವರ ಸ್ವಾಮಿ ಹಾಗೂ ಶ್ರೀ ಕಾಲ ಭೈರವೇಶ್ವರ ಸ್ವಾಮಿ ದೇವಾಲಯಗಳಲ್ಲಿರುವ ಶ್ರೀ ಮಹಾಗಣಪತಿ ಹಾಗೂ ಶ್ರೀ ಬಸವೇಶ್ವರ ಸ್ವಾಮಿ ಯವರ ಮೂರ್ತಿ ಪ್ರಾಣ ಪ್ರತಿಷ್ಠಾಪನೆ ಮತ್ತು ದೇವಾಲಯಗಳ ಮೇಲ್ಛಾವಣಿ ಕಳಸ ಪ್ರತಿಷ್ಠಾಪನೆ ಹಾಗೂ ಕುಂಬಾಭಿಷೇಕ ಅಂಗ ವಾಗಿ ನಡೆದ ಧಾರ್ಮಿಕ ಕಾರ್ಯಕ್ರಮದ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ದೇವಾಲಯಗಳ ನಿರ್ಮಾಣದಿಂದ ಗ್ರಾಮ ದಲ್ಲಿ ಒಗ್ಗಟ್ಟು ಮೂಡುವುದರ ಜೊತೆಗೆ ಧಾರ್ಮಿಕ ಭಾವನೆ ಹೆಚ್ಚಾಗಲಿದೆ. ಶ್ರೀ ಆದಿ ಚುಂಚನಗಿರಿ ಮಠದ ವತಿಯಿಂದ ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡಲಾಗುತ್ತಿದೆ. ಈ ಭಾಗದ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡಲು ಅಣತಿ ಗ್ರಾಮದಲ್ಲಿ ಮಠದ ವತಿಯಿಂದ ಶಾಲೆಯನ್ನು ತೆರೆಯಲಾಗಿದೆ ಎಂದರು.



ಶಾಸಕ ಕೆ.ಎಂ.ಶಿವಲಿಂಗೇಗೌಡ ಅವರು ಮಾತನಾಡಿ, ಹೇಮಾವತಿ ಡ್ಯಾಮ್ ಜಿಲ್ಲೆಯಲ್ಲಿ ಇದ್ದರೂ ಕೂಡ ಅರಸೀಕೆರೆ ಹಾಗೂ ಚನ್ನ ರಾಯಪಟ್ಟಣ ತಾಲ್ಲೂಕಿನ ಕೆರೆಗಳನ್ನು ತುಂಬಿ ಸಲು ಸಾಧ್ಯವಾಗುತ್ತಿಲ್ಲ. ನೀರಾವರಿ ಇಲಾ ಖೆಯ ಕೆಲವು ಕಾಯ್ದೆಗಳಿಂದ ಸಮಸ್ಯೆಯಾ ಗುತ್ತಿದೆ. ಈ ಬಗ್ಗೆ ರಾಜ್ಯ ಸರ್ಕಾರ ಹಾಸನ ಜಿಲ್ಲೆ ಯನ್ನು ಈ ಕಾಯ್ದೆಯಿಂದ ಹೊರಗಿಟ್ಟು ಪುನರ್ ನವೀಕರಿ ಸುವಂತೆ ಮನವಿ ಮಾಡಿ ದರು. ಈಗಾಗಲೇ ಹೇಮಾವತಿ ನದಿಯಿಂದ ಪೈಪ್‌ಲೈನ್ ಮೂಲಕ ತಾಲ್ಲೂಕಿನ 10 ಕೆರೆಗಳಿಗೆ ನೀರನ್ನು ತುಂಬಿಸಲಾಗಿದೆ. ಎತ್ತಿನ ಹೊಳೆ ಯೋಜನೆ ಪೂರ್ಣಗೊಂಡರೆ ತಾಲ್ಲೂಕಿನ ಎಲ್ಲಾ ಕೆರೆಗಳಿಗೆ ನೀರು ತುಂಬಿಸಲು ಸಾಧ್ಯ ವಾಗುತ್ತದೆಂದು ತಿಳಿಸಿದರು.

ಶಾಸಕ ಸಿ.ಎನ್.ಬಾಲಕೃಷ್ಣ ಅವರು ಮಾತ ನಾಡಿ, ಗ್ರಾಮದಲ್ಲಿ ಸುಮಾರು 1 ಕೋಟಿ ರೂ. ವೆಚ್ಚದಲ್ಲಿ ಶ್ರೀ ಮಹಾಗಣಪತಿ ಹಾಗೂ ಶ್ರೀ ಬಸವೇಶ್ವರ ಸ್ವಾಮಿಯವರ ಮೂರ್ತಿ ಪ್ರತಿ ಷ್ಠಾಪನೆ ಸೇರಿ ವಿವಿಧ ದೇವಾಲಯದ ಅಭಿವೃದ್ಧಿ ಕೆಲಸಗಳಿಗೆ ಆದ್ಯತೆ ನೀಡಲಾಗಿದೆ. ಗ್ರಾಮದಲ್ಲಿ ನಿರ್ಮಾಣವಾಗಬೇಕಾಗಿರುವ ಶ್ರೀ ಆಂಜ ನೇಯ ಸ್ವಾಮಿ ದೇವಾಲಯ ನಿರ್ಮಾಣಕ್ಕೆ 10 ಲಕ್ಷ ರೂ. ಅನುದಾನ ಕೊಡುವುದಾಗಿ ಭರವಸೆ ನೀಡಿದ ಅವರು ತಾಲ್ಲೂಕಿನಲ್ಲಿ ಸರ್ಕಾರದಿಂದ ಮಂಜೂರಾದ ಏತನೀರಾವರಿ ಯೋಜನೆಗಳ ಜೊತೆಗೆ ವೈಯಕ್ತಿಕವಾಗಿ 40ಕ್ಕೂ ಹೆಚ್ಚು ಕೆರೆ ಗಳನ್ನು ತುಂಬಿಸಲು ವೈಯಕ್ತಿಕವಾಗಿ ಹಣ ನೀಡುವುದಾಗಿ ಹೇಳಿದರು.

ವಿಧಾನ ಪರಿಷತ್ ಮಾಜಿ ಸದಸ್ಯ ಎಂ.ಎ. ಗೋಪಾಲಸ್ವಾಮಿ ಅವರು ಮಾತನಾಡಿ, ನನ್ನ ಅವಧಿಯಲ್ಲಿ ತಾಲ್ಲೂಕಿನ ಅನೇಕ ದೇವಾಲಯ ಗಳ ಜೀರ್ಣೋದ್ಧಾರಕ್ಕೆ ಹೆಚ್ಚಿನ ಅನುದಾನ ನೀಡಿದ್ದೇನೆ. ಜೊತೆಗೆ ನೀರಾವರಿ ಯೋಜನೆಗೆ ಸರ್ಕಾರದಿಂದ ಹೆಚ್ಚಿನ ಅನುದಾನ ಬಿಡುಗಡೆ ಮಾಡಿಸುವಲ್ಲಿ ಶ್ರಮ ವಹಿಸಿರುವುದಾಗಿ ತಿಳಿಸಿದರು.

ಆದಿಚುಂಚನಗಿರಿ ಹಾಸನ ಶಾಖಾ ಮಠದ ಶ್ರೀ ಶಂಭುನಾಥ ಸ್ವಾಮೀಜಿ ಭಕ್ತರಿಗೆ ಆಶೀ ರ್ವಚನ ನೀಡಿದರು. ಮಂಗಳವಾರ ರಾತ್ರಿ ನಡೆದ ಪೂಜಾ ಕಾರ್ಯಕ್ರಮದಲ್ಲಿ ನೊಣವಿನ ಕೆರೆ ಕನ್ನಡ ಸಿದ್ದೇಶ್ವರ ಮಹಾ ಸಂಸ್ಥಾನ ಮಠದ ಡಾ.ಕರಿ ವೃಷಭ ದೇಶಿ ಕೇಂದ್ರ ಶಿವಯೋಗೀ ಶ್ವರ ಸ್ವಾಮೀಜಿ ದೇವರಿಗೆ ವಿಶೇಷ ಪೂಜೆ ಸಲ್ಲಿಸಿದರು.

ಮಾಜಿ ಶಾಸಕ ಸಿ.ಎಸ್.ಪುಟ್ಟೇಗೌಡ, ಮು ಖಂಡ ಎನ್.ಆರ್.ಸಂತೋಷ್, ಯೋಜನಾ ಪ್ರಾಧಿಕಾರದ ಮಾಜಿ ಅಧ್ಯಕ್ಷ ಎ.ಸಿ.ಆನಂದ್ ಕುಮಾರ್, ತಾಲ್ಲೂಕು ಅರ್ಚಕರ ಸಂಘದ ಶ್ರೀಧರ್‌ಮೂರ್ತಿ, ಸದ್ಗುರು ಡೆವಲಪರ್ಸ್ ಮಾಲಿಕ ಅಣತಿ ಯೋಗೇಶ್, ಉದ್ಯಮಿ ಸುರೇಶ್, ಶ್ರೀ ಕಾಲಭೈರವೇಶ್ವರ ಸ್ವಾಮಿ ಸೇವಾ ಸಮಿತಿ ಅಧ್ಯಕ್ಷ ಬೋರ್‌ವೆಲ್ ರಾಮಚಂದ್ರು, ಉಪಾಧ್ಯಕ್ಷ ಸಣ್ಣ ರಂಗೇಗೌಡ, ಮುಖಂಡರಾದ ಜೈ ರಾಮಣ್ಣ, ವಿ.ಸಿ.ಗಿರೀಶ್, ಎಡಿ ಶಿವೇಗೌಡ, ಗಿರೀಶ್, ಬೋರೇಗೌಡ ಇತರರಿದ್ದರು.

### ಸಿಎಂ ಬದಲಾವಣೆ ಚರ್ಚೆಯೇ ಅಪ್ರಸ್ತುತ

» ಮೊದಲನೇ ಪುಟದಿಂದ

ಶಿವಕುಮಾರ್ ಹಣೆಯಲ್ಲಿ ಬರೆದಿದ್ದರೆ ಮುಖ್ಯ ಮಂತ್ರಿ ಆಗುತ್ತಾರೆ. ಇಲ್ಲದಿದ್ದರೆ ಆಗುವುದಿಲ್ಲ. ಅದರ ಬಗ್ಗೆ ಏಕೆ ಚಿಂತಿಸಬೇಕು. ಆ ಗುರಿಯತ್ತ ಯಾವ ಪ್ರಯತ್ನಗಳಿಲ್ಲ. ಪಕ್ಷದ ನಿರ್ಧಾರದಂತೆ ಶಿವಕುಮಾರ್ ಮುಂದುವರಿಯುತ್ತಾರೆ. ಪಕ್ಷಕ್ಕೆ ಯಾವುದೇ ಹಾನಿ ಯಾಗದಂತೆ ವರ್ತಿಸುವುದು ಅವರ ಕರ್ತವ್ಯ. ಅವರು ಅದನ್ನು ಮಾಡುತ್ತಾರೆಂಬ ವಿಶ್ವಾಸವಿದೆ ಎಂದರು.

ಕರ್ನಾಟಕದಲ್ಲಿ ನಾಯಕತ್ವ ಬದಲಾವಣೆಯ ಊಹಾಪೋಹಗಳು ಶುರುವಾಗಿವೆ. ಅದನ್ನು ಕೆಲವರು ನವೆಂಬರ್ ಕ್ರಾಂತಿ ಎನ್ನುತ್ತಿದ್ದಾರೆ. ಅದರ ಬಗ್ಗೆ ಯಾವ ಮಾಹಿತಿ ಇಲ್ಲ. ನನಗೆ ನವೆಂಬರ್ ಎಂದರೆ ಕನ್ನಡ ರಾಜ್ಯೋತ್ಸವ ಮತ್ತು ಕನ್ನಡಿಗರ ಹಬ್ಬ ಮಾತ್ರವೇ ಗೊತ್ತು ಎಂದರು.

ಕಾಂಗ್ರೆಸ್‌ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಗತ್ಯವಿದೆ. 95 ರಿಂದ 98 ವರ್ಷ ವಯಸ್ಸಿನ ಜನರು ಇನ್ನೂ ರಾಜಕೀಯದಲ್ಲಿ ಸಕ್ರಿಯರಾಗಿದ್ದಾರೆ. ಆದ್ದ ರಿಂದ ಸಿದ್ದರಾಮಯ್ಯ ಮತ್ತೆ ಸ್ಪರ್ಧಿಸುವುದಾಗಿ ಹೇಳಿ ದರೆ ತಪ್ಪೇನಿಲ್ಲ. ಅವರು ನಮ್ಮ ನಾಯಕ ಮತ್ತು ಅವರ ನಾಯಕತ್ವದಲ್ಲಿ 2028ರ ಚುನಾವಣೆ ಎದುರಿ ಸುತ್ತೇವೆಂದರು. ದಲಿತ ಸಮಾವೇಶ ಮಾಡುವುದರಲ್ಲಿ ಯಾವ ತಪ್ಪಿಲ್ಲ. ಏಕೆಂದರೆ ಅದು ಪಕ್ಷದ ಸಂಘಟ ನೆಯನ್ನು ಬಲಪಡಿಸಲು ಸಹಾಯ ಮಾಡುತ್ತದೆ. ಸಮಾವೇಶ ವನ್ನು ಪಕ್ಷದ ಬ್ಯಾನರ್ ಅಡಿಯಲ್ಲಿ ನಡೆಸಬೇಕೇ ಅಥವಾ ಬೇಡವೇ ಎಂಬುದನ್ನು ಆಯೋ ಜಕರು ನಿರ್ಧರಿಸುತ್ತಾರೆಂದು ಪ್ರತಿಕ್ರಿಯಿಸಿದರು.

## ಸಾರ್ವಜನಿಕ ಆಸ್ಪತ್ರೆ ಸೌಲಭ್ಯ ಸದುಪಯೋಗಪಡಿಸಿಕೊಳ್ಳಿ



• ಪ್ರಜೋದಯ ವರದಿ

**ಆಲೂರು:** ಪಟ್ಟಣದಲ್ಲಿರುವ ತಾಲ್ಲೂಕು ಸಾರ್ವಜನಿಕ ಆಸ್ಪತ್ರೆಯಲ್ಲಿ ಸೌಲಭ್ಯಗಳು ಉತ್ತಮವಾಗಿದ್ದು, ರೋಗಿಗಳೊಂದಿಗೆ ವೈದ್ಯರ ಸ್ಪಂದನೆ ಉತ್ತಮವಾಗಿದೆ ಎಂದು ಶಾಸಕ ಸಿಮೆಂಟ್ ಮಂಜು ಅವರು ಸಂತಸ ವ್ಯಕ್ತಪಡಿಸಿದರು.

ಪಟ್ಟಣದ ತಾಲ್ಲೂಕು ಆಸ್ಪತ್ರೆಯಲ್ಲಿ ನೂತನ ಕುಡಿಯುವ ನೀರಿನ ಘಟಕ, ಫೋಟೋಥೆರಫಿ ಮತ್ತು ಹಾಸಿಗೆಗಳಿಗೆ ನೂತನ ದಿಂಬು, ಸೊಳ್ಳೆಪರದೆ ವಿತರಣೆ ಮಾಡಿ ಮಾತನಾಡಿ, ಈ ಆಸ್ಪತ್ರೆಯಲ್ಲಿ ಮಕ್ಕಳು ಜನಿಸಿದ ಸಂದರ್ಭದಲ್ಲಿ ಜಾಂಡೀಸ್ ಕಾಯಿಲೆ ನಿವಾರಣೆಗಾಗಿ ಫೋಟೋಥೆರಫಿ ಚಿಕಿತ್ಸೆ ದೊರಕದೆ ಹಾಸನಕ್ಕೆ ಕಳು ಹಿಸಬೇಕಾಗಿತ್ತು. ಈಗ ಇದೆ ಆಸ್ಪತ್ರೆ ಯಲ್ಲಿ ಸೌಲಭ್ಯ ದೊರಕುವುದರಿಂದ ಸಾರ್ವಜನಿಕರು ಸದುಪಯೋ ಗಪಡಿಸಿಕೊಳ್ಳಬೇಕೆಂದರು.

ಇತ್ತೀಚೆಗೆ ಮಕ್ಕಳ ತಜ್ಞವೈದ್ಯರು ಮತ್ತು ಅನಸ್ತೇಷಿಯ ತಜ್ಞ ವೈದ್ಯರು ವರ್ಗಾವಣೆಗೊಂಡಿ ದ್ದಾರೆ. ಖಾಲಿ ಇರುವ ಜಾಗ ತುಂಬಲು ಕೂಡಲೇ ಕ್ರಮಕೈಗೊಳ್ಳುತ್ತೇನೆ. ಆಸ್ಪತ್ರೆ ಅತ್ಯಂತ ಸುಸಜ್ಜಿತ ಮತ್ತು ಶುಚಿತ್ವದಿಂದ ಕೂಡಿದೆ. 1,500 ಲೀಟರ್ ಸಾಮರ್ಥ್ಯವುಳ್ಳ ಶುದ್ಧ ಕುಡಿಯುವ ನೀರು ಘಟಕವನ್ನು ತೆರೆಯಲಾಗಿದ್ದು, ಸಾರ್ವಜನಿಕರು ಉಪಯೋಗಿಸುವ ಸಂದರ್ಭದಲ್ಲಿ ಶುಚಿತ್ವಕ್ಕೆ ಆದ್ಯತೆ ನೀಡಬೇಕು ಎಂದರು.

ತಾಲ್ಲೂಕು ಆರೋಗ್ಯಾಧಿಕಾರಿ ಡಾ॥ನಿಸಾರ್‌ಫಾತಿಮ ಅವರು ಮಾತ ನಾಡಿ, ಆಸ್ಪತ್ರೆ ಮುಂಭಾಗ ಮುಖ್ಯ ಬೀದಿಯಂಚಿನಲ್ಲಿರುವ ಚರಂಡಿಗೆ ಸ್ಲ್ಯಾಬ್ ಹಾಕಿಸಿದರೆ, ಆಸ್ಪತ್ರೆಗೆ ಬರುವ ರೋಗಿಗಳ ವಾಹನಗಳನ್ನು ನಿಲ್ಲಿಸಲು ಅನುಕೂಲವಾಗುತ್ತದೆಂದು ಶಾಸಕರ ಗಮನ ಸೆಳೆದರು. ಸ್ಥಳದಲ್ಲಿದ್ದ ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಮಂಜುನಾಥ್ ರವರಿಗೆ ಕೂಡಲೇ ಸ್ಲ್ಯಾಬ್ ಅಳವಡಿಸಿ ಅನುಕೂಲ ಮಾಡಿ ಕೊಡುವಂತೆ ಸೂಚಿಸಿದರು.

ಶಾಸಕರು ಆಸ್ಪತ್ರೆಗೆ ಭೇಟಿ ನೀಡಿದ ಸಂದರ್ಭದಲ್ಲಿ ಒಳರೋಗಿಗಳೊಂದಿಗೆ ಸಮಾಲೋಚನೆ ನಡೆಸಿದರು. ವೈದ್ಯರು, ದಾದಿಯರ ಕರ್ತವ್ಯದ ಬಗ್ಗೆ ಪರಿಶೀಲನೆ ನಡೆಸಿದರು.

## ಡಿಸೆಂಬರ್‌ನಲ್ಲಿ ವಿಶ್ವ ಯೋಗ ಶೃಂಗಸಭೆ



• ಪ್ರಜೋದಯ ವರದಿ

**ಹಾಸನ:** ವಿಶ್ವ ಯೋಗ ಶೃಂಗಸಭೆ ಯನ್ನು ಡಿ.6 ಮತ್ತು 7 ರಂದು ಬೆಂಗ ಳೂರಿನಲ್ಲಿ ಹಮ್ಮಿ ಕೊಳ್ಳಲಾಗಿದೆ. 50ಕ್ಕೂ ಹೆಚ್ಚು ದೇಶಗಳಿಂದ ಸಂಪನ್ಮೂಲ ವ್ಯಕ್ತಿ ಗಳು ಭಾಗವಹಿಸಲಿದ್ದಾರೆಂದು ಶೃಂಗ ಸಭೆ ಹಾಸನ ಉಸ್ತುವಾರಿ ನಿರಂಜನ್ ರಾಜ್ ಅವರು ತಿಳಿಸಿದರು.

ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಶೃಂಗಸಭೆ ಯಲ್ಲಿ ಭಾಗವಹಿಸು ವವರು ಆನ್‌ಲೈನ್ ಮೂಲಕ ನೋಂದಣಿ ಮಾಡಿಕೊಳ್ಳಲು ಅವಕಾಶ ನೀಡಲಾಗಿದೆ.ನಗರದ ಮಹಾ ರಾಜ ಪಾರ್ಕ್‌ನಲ್ಲಿ ಅರ್ಜಿ ಪಡೆದು ಆಫ್‌ಲೈನ್ ಮೂಲಕವೂ ನೋಂದಣಿ ಮಾಡಿಕೊಳ್ಳ ಬಹುದು. 5 ಸಾವಿರಕ್ಕೂ ಹೆಚ್ಚು ಜನರು ಸೇರುವ ನಿರೀಕ್ಷೆ ಇದೆ ಎಂದು ಹೇಳಿದರು.

60ಕ್ಕೂ ಹೆಚ್ಚು ರಾಷ್ಟ್ರೀಯ ಮತ್ತು ಅಂತರರಾಷ್ಟ್ರೀಯ ವೈದ್ಯರು, ಯೋಗ ಗುರುಗಳು, ವೇದ ತಜ್ಞರು, ಶಿಕ್ಷಣ ತಜ್ಞರು ಭಾಗವಹಿಸಲಿದ್ದಾರೆ. 100ಕ್ಕೂ ಹೆಚ್ಚು ವೈಜ್ಞಾನಿಕ ಸಂಶೋಧನಾ ಪ್ರಬಂಧಗಳ ಮಂಡನೆ, 108 ಪೂರ್ವ ಸಮ್ಮೇಳನ, 60 ಭಾಷಣಕಾರರು, 125 ಪೂರ್ವ ಸಮ್ಮೇಳನ ಪ್ರವರ್ತಕರು, ಅಂತರರಾಷ್ಟ್ರೀಯ ಆಧ್ಯಾತ್ಮಿಕ ಗುರು ಗಳೊಂದಿಗೆ ಸಂವಾದ, 25ಕ್ಕೂ ಹೆಚ್ಚು ಬಗೆಯ ಉಚಿತ ಚಿಕಿತ್ಸೆ, ಅಂತರ ರಾಷ್ಟ್ರೀಯ ಯೋಗ ಪ್ರದರ್ಶನ, ಎಲ್ಲಾ ಆಧ್ಯಾತ್ಮಿಕ ಗುರುಗಳು ಒಂದೇ ವೇದಿಕೆಯಲ್ಲಿ ಸೇರಲಿದ್ದಾರೆ ಎಂದರು.

ಅಗ್ನಿಹೋತ್ರ, ಸೂರ್ಯ ನಮಸ್ಕಾರ, ಲಲಿತ ಸಹಸ್ರನಾಮ, ವಿಷ್ಣು ಸಹಸ್ರ ನಾಮ, ಸೌಂದರ್ಯ ಲಹರಿ, ಮಹಾ ಮೃತ್ಯುಂಜಯ ಮಂತ್ರ, ಭಗವದ್ಗೀತೆ ಪಠಣ, ರೇಖಿ ಚಿಕಿತ್ಸೆ, ಆಕ್ಯುಪ್ರೆಶರ್, ಆಕ್ಯುಪಂಕ್ಚರ್, ಮೆಡಿಕಲ್ ಅಸ್ಟ್ರಾಲಜಿ, ಮೆಡಿಕಲ್ ನ್ಯುಮರಾಲಜಿ, ಉಪವಾಸ ಚಿಕಿತ್ಸೆ, ಪ್ರಾಣಾಯಾಮ, ಧ್ಯಾನ, ನಾಡಿ ಪರೀಕ್ಷೆ, ಮರ್ಮಾ ಚಿಕಿತ್ಸೆ, ಯೋಗ ಚಿಕಿತ್ಸೆ ಮುಂತಾದ ಕ್ರಮಗಳು ನಡೆಯ ಲಿದೆ. ಅದೇ ರೀತಿ ಹಲವು ಕಾಯಿಲೆಗಳಿಗೆ ಚಿಕಿತ್ಸೆ ಮತ್ತು ಪರಿಹಾರ ಕ್ರಮಗಳನ್ನು ತಿಳಿಸಲಾಗುವುದೆಂದು ಹೇಳಿದರು.

ಕೃಷ್ಣಪ್ಪ, ಮನೋಹರ್, ನಾಗರಾಜ್, ಶೇಷಪ್ಪ ಹಾಜರಿದ್ದರು.

## ಸಹಕಾರಿ ರಂಗದಿಂದ ರೈತರ ಅಭಿವೃದ್ಧಿ

• ಪ್ರಜೋದಯ ವರದಿ

**ಚನ್ನರಾಯಪಟ್ಟಣ:** ಸಹಕಾರಿ ವ್ಯವಸ್ಥೆ ಯಲ್ಲಿ ಸಹಕಾರ ತತ್ವದಡಿ ಕಾರ್ಯ ನಿರ್ವಹಿಸಿದರೆ ಸ್ಥಳೀಯ ಸಂಸ್ಥೆಗಳು ಉನ್ನತಮಟ್ಟಕ್ಕೆ ಬೆಳೆದು ವಿಸ್ತಾರವಾಗಿ ಅಭಿವೃದ್ಧಿ ಹೊಂದುತ್ತದೆಂದು ಶಾಸಕ ಸಿ.ಎನ್.ಬಾಲಕೃಷ್ಣ ಅವರು ತಿಳಿಸಿದರು.

ತಾಲ್ಲೂಕಿನ ಶ್ರವಣಬೆಳಗೊಳ ಹೋಬಳಿ ಸುಂಡಹಳ್ಳಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಚುನಾವಣೆ ಯಲ್ಲಿ ಎಲ್ಲಾ ಸ್ಥಾನಗಳಲ್ಲಿಯೂ ಜೆಡಿ ಎಸ್ ಬೆಂಬಲಿತ ನಿರ್ದೇಶಕರು ಅವಿ ರೋಧವಾಗಿ ಆಯ್ಕೆಯಾದ ಹಿನ್ನಲೆ ಯಲ್ಲಿ ನೂತನ ನಿರ್ದೇಶಕರನ್ನು ಅಭಿನಂದಿಸಿ ಮಾತನಾಡಿದ ಅವರು, ಸಮಾನತೆ ಸಹಕಾರಿ ಕ್ಷೇತ್ರದ ಶಕ್ತಿಯಾ ಗಿದ್ದು, ಎಲ್ಲರ ಸಹಭಾಗಿತ್ವದಲ್ಲಿ ವಿಶ್ವಾಸದಿಂದ ತೊಡಗಿಸಿಕೊಂಡಿರು ವುದು ಕ್ಷೇತ್ರದ ಬೆಳವಣಿಗೆಗೆ ಕಾರಣ ವಾಗಿದೆ. ಸಂಸ್ಥೆ ಬೆಳೆಯಲು ಪ್ರಾಮಾ ಣಿಕತೆ, ನಿಸ್ವಾರ್ಥತೆ, ಸಮಾಜದ ಬಗ್ಗೆ ಕಳಕಳಿ ಇದ್ದಾಗ ಮಾತ್ರ ಸಂಸ್ಥೆ ಬೆಳೆಯಲು ಸಾಧ್ಯವಿದೆ ಎಂದರು.



ತಾಲ್ಲೂಕಿನಲ್ಲಿಯೇ ಅತಿ ದೊಡ್ಡ ಸೊಸೈಟಿ ಸುಂಡಹಳ್ಳಿ ಆಗಿದ್ದು, ಎರಡು ಸಾವಿರ ಮಂದಿ ಷೇರುದಾ ರರನ್ನು ಹೊಂದಿದೆ, ಈ ಸೊಸೈಟಿ ಯಲ್ಲಿ 12 ಜನ ನಿರ್ದೇಶಕರು ಅವಿ ರೋಧವಾಗಿ ಆಯ್ಕೆಯಾಗಿರುವುದು ತುಂಬಾ ಸಂತೋಷದ ವಿಚಾರ. ಮೂರು ಪಕ್ಷಗಳ ಮುಖಂಡರು ಒಮ್ಮತದ ಮೇರೆಗೆ ಜೆಡಿಎಸ್ ಪಕ್ಷಕ್ಕೆ 9 ಸ್ಥಾನಗಳು, ಕಾಂಗ್ರೆಸ್ ಪಕ್ಷಕ್ಕೆ 2 ಸ್ಥಾನಗಳು, ಬಿಜೆಪಿ ಪಕ್ಷಕ್ಕೆ ಒಂದು ಸ್ಥಾನವನ್ನು ಬಿಟ್ಟು ಕೊಡಲಾಗಿದೆ, ಎಲ್ಲಾ ಪಕ್ಷಗಳ ಹೊಂದಾಣಿಕೆಯಿಂದ ಈ ಸೊಸೈಟಿಯ ಅಭಿವೃದ್ಧಿಗೆ ಶ್ರಮಿಸ ಬೇಕೆಂದು ನೂತನ ನಿರ್ದೇಶಕರಿಗೆ ಸಲಹೆ ನೀಡಿದರು.

ಕರ್ನಾಟಕ ಸಹಕಾರ ಮಾರಾಟ ಮಹಾಮಂಡಳಿ ನಿರ್ದೇಶಕರಾದ ಸಿ.ಎನ್.ಪುಟ್ಟಸ್ವಾಮಿಗೌಡ, ಟಿಎಪಿಸಿ ಎಂಎಸ್‌ನ ನಿರ್ದೇಶಕರಾದ ಪರಮ ಕೃಷ್ಣೇಗೌಡ, ಕುಂಬಾರಹಳ್ಳಿ ರಮೇಶ್, ಮೆಡಿಕಲ್ ವೆಂಕಟೇಶ್, ನೂತನ ನಿರ್ದೇಶಕರಾದ ಎನ್.ಕೃಷ್ಣೇಗೌಡ, ಬಿ.ಕೃಷ್ಣಮೂರ್ತಿ, ಎಚ್.ಎಸ್. ದಿವಾ ಕರ್, ನಂದಕುಮಾರ್, ವಾಸಣ್ಣ, ಶ್ವೇತಾ, ಹುಚ್ಚಮ್ಮ, ಅಣ್ಣಯ್ಯ, ಬಸವ ರಾಜ್, ಮಂಜು ನಾಥ್, ಜೆ.ಭುವನೇ ಶ್ವರಿ, ಹರೀಶ್, ಕಾರ್ಯದರ್ಶಿ ನಾಗರಾಜು ಇತರರು ಹಾಜರಿದ್ದರು.

## ನಾಳೆ ಅಂಬೇಡ್ಕರ್ ಪುತ್ಥಳಿ ಪ್ರತಿಷ್ಠಾಪನೆ



• ಪ್ರಜೋದಯ ವರದಿ

**ಹಾಸನ:** ಚನ್ನರಾಯಪಟ್ಟಣ ತಾಲ್ಲೂಕು ಕಚೇರಿ ಎದುರು ಅ.31 ರಂದು ಅಂಬೇಡ್ಕರ್ ಕಂಚಿನ ಪುತ್ಥಳಿ ಪ್ರತಿಷ್ಠಾಪನೆ ಮಾಡಲಾಗುವುದೆಂದು ಡಾ.ಬಿ.ಆರ್.ಅಂಬೇಡ್ಕರ್ ಪುತ್ಥಳಿ ನಿರ್ಮಾಣ ಹಾಗು ವಿವಿಧೋ ದ್ದೇಶ ಸಮಾಜ ಸೇವಾ ಸಮಿತಿ ಗೌರವ ಅಧ್ಯಕ್ಷ ರಂಗಪ್ಪ ಅವರು ಹೇಳಿದರು.

ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು,ಡಾ.ಬಿ.ಆರ್. ಅಂಬೇಡ್ಕರ್ ಪುತ್ಥಳಿ ನಿರ್ಮಾಣ ಹಾಗು ವಿವಿಧೋದ್ದೇಶ ಸಮಾಜ ಸೇವಾ ಸಮಿತಿ ಹೋರಾಟ ಮಾಡಿದ ಫಲವಾಗಿ ಚನ್ನ ರಾಯಪಟ್ಟಣ ಪುರಸಭೆ ಹಾಗು ಶಾಸಕ ಸಿ.ಎನ್. ಬಾಲಕೃಷ್ಣ ಅವರ ನೆರವಿನಿಂದ ಅಂಬೇಡ್ಕರ್ ಪುತ್ಥಳಿ ಪ್ರತಿಷ್ಠಾಪನೆ ಮಾಡಲಾಗುವುದೆಂದು ತಿಳಿಸಿದರು.

ಅ.31 ರಂದು ಬೆಳಿಗ್ಗೆ 9 ಗಂಟೆಗೆ ಪುತ್ಥಳಿ ಪ್ರತಿ ಷ್ಠಾಪನೆ ಮಾಡುತ್ತಿದ್ದು ಕಾರ್ಯಕ್ರಮದಲ್ಲಿ ಶಾಸಕ ಸಿ.ಎನ್ .ಬಾಲಕೃಷ್ಣ, ಪುರಸಭೆ ಅಧ್ಯಕ್ಷರು, ಉಪಾ ಧ್ಯಕ್ಷರು, ಸದಸ್ಯರು, ಪುರಸಭೆ ಮುಖ್ಯಾಧಿಕಾರಿ, ದಲಿತ, ರೈತಪರ ಸಂಘಟನೆಗಳ ಮುಖಂಡರು ಭಾಗವ ಹಿಸುವರು. ಸಮಿತಿ ಯಿಂದ ಅನ್ನದಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಅಂಬೇಡ್ಕರ್ ಅಭಿಮಾನಿಗಳು, ಅನು ಯಾಯಿಗಳು, ದಲಿತಪರ ಸಂಘಟನೆ ಕಾರ್ಯ ಕರ್ತರು ಭಾಗವಹಿಸಬೇಕೆಂದು ಮನವಿ ಮಾಡಿದರು. ಸಮಿತಿ ಪ್ರಧಾನ ಕಾರ್ಯ ದರ್ಶಿ ಕೆ.ವಿ.ಸತೀಶ್ ಇದ್ದರು.

## ಸುರಂಗ ಟ್ರಾಫಿಕ್ ಸಮಸ್ಯೆ ನಿವಾರಣೆಗೆಂದು ತಪ್ಪಾಗಿ ಭಾವಿಸಿದ್ದೆ

### ಸಂಸದ ತೇಜಸ್ವಿ ಸೂರ್ಯ ವ್ಯಂಗ್ಯ

• ಪ್ರಜೋದಯ ವರದಿ

**ಬೆಂಗಳೂರು:** ಕಾರು ಇಲ್ಲದ ಪುರು ಷರಿಗೆ ಜನರು ಹೆಣ್ಣು ಮಕ್ಕಳನ್ನು ಮದುವೆ ಮಾಡಿಕೊಡು ವುದಿಲ್ಲ ಎಂಬ ಬೆಂಗಳೂರಿನ ಸುರಂಗ ರಸ್ತೆ ಯೋಜನೆಯನ್ನು ಸಮರ್ಥಿಸಿಕೊಂಡ ಉಪಮುಖ್ಯ ಮಂತ್ರಿ ಡಿ.ಕೆ.ಶಿವ ಕುಮಾರ್ ಅವರ ಹೇಳಿಕೆಗೆ ಸಂಸದ ತೇಜಸ್ವಿಸೂರ್ಯ ವ್ಯಂಗ್ಯವಾಡಿದ್ದಾರೆ.

ಡಿ.ಕೆ.ಶಿವಕುಮಾರ್ ಅವರನ್ನು ಭೇಟಿಯಾಗಿದ್ದ ತೇಜಸ್ವಿ ಸೂರ್ಯ, ಸುರಂಗ ರಸ್ತೆ ಯೋಜನೆ ಯನ್ನು ಕೈಬಿಟ್ಟು ಸಾಮೂಹಿಕ ಸಾರಿಗೆಯನ್ನು ವಿಸ್ತರಿಸುವಂತೆ ಮನವಿ ಮಾಡಿದ್ದರು. ಈ ಭೇಟಿಯ ವೇಳೆಯಲ್ಲಿ ಟನಲ್ ರಸ್ತೆ ಬಗ್ಗೆ ಆಕ್ಷೇಪ ವ್ಯಕ್ತಪಡಿಸಿ ಪರ್ಯಾಯ ವ್ಯವಸ್ಥೆಗೆ ತೇಜಸ್ವಿ ಸೂರ್ಯ ನೀಡಿದ್ದ ಸಲಹೆಗಳ ಬಗ್ಗೆ ಶಿವಕುಮಾರ್ ಪ್ರತಿಕ್ರಿಯಿಸಿ, ಒಂದೇ ಮನೆಯಲ್ಲಿರುವ ಗಂಡ ಮತ್ತು ಮದುವೆಯಾಗುವ ಹುಡುಗನ ಬಳಿ ಕಾರು ಇಲ್ಲದಿದ್ದರೆ ಹುಡುಗಿ ಮನೆಯ ವರು ಮದುವೆ ಪ್ರಸ್ತಾಪವನ್ನೇ ತಿರಸ್ಕರಿ ಸುತ್ತಾರೆ. ಇದು ಸಂಸದ ತೇಜಸ್ವಿ ಸೂರ್ಯ ಅವರಿಗೆ ತಿಳಿದಿಲ್ಲದ ಸಾಮಾಜಿಕ ವಾಸ್ತವ ಎಂದು



ಹೇಳಿದ್ದರು.

ಈ ಹೇಳಿಕೆಗೆ ಪ್ರತಿಕ್ರಿಯೆ ನೀಡಿರುವ ಸಂಸದ ತೇಜಸ್ವಿಸೂರ್ಯ, ಸುರಂಗ ರಸ್ತೆ ಕಾರು ಇಲ್ಲದ ವ್ಯಕ್ತಿ ಯನ್ನು ಮದುವೆಯಾಗಲು ಬಯಸ ದಿರುವ ಜನರ ಸಾಮಾಜಿಕ ಸಮಸ್ಯೆ ಯನ್ನು ಪರಿಹರಿ ಸಲು ಉದ್ದೇಶಿಸಲಾ ಗಿದೆ ಎಂಬುದು ತಿಳಿದಿರಲಿಲ್ಲವೆಂದು ವ್ಯಂಗ್ಯವಾಡಿದ್ದಾರೆ.

ಇಷ್ಟು ದಿನಗಳಿಂದ, ಸುರಂಗ ಯೋಜನೆಯು ಬೆಂಗಳೂರಿನ ಸಂಚಾರ ಸಮಸ್ಯೆಯನ್ನು ಪರಿಹರಿ ಸುವ ಗುರಿ ಹೊಂದಿದೆ ಎಂದು ನಾನು ತಪ್ಪು ಅಭಿಪ್ರಾಯದಲ್ಲಿದ್ದೆ. ಆದರೆ ಡಿ.ಕೆ.ಶಿವಕುಮಾರ್ ಯೋಜನೆ ಮೂಲಕ ಕಾರು ಇಲ್ಲದ ವ್ಯಕ್ತಿಯನ್ನು ಮದುವೆಯಾಗಲು ಬಯಸದ ಜನರ ಸಾಮಾಜಿಕ ಸಮಸ್ಯೆಯನ್ನು ಪರಿಹರಿ ಸುವ ಉದ್ದೇಶವನ್ನು ಹೊಂದಿದ್ದಾ ರೆಂದು ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ.

ಶಿವಕುಮಾರ್ ಅವರೊಂದಿಗಿನ ಭೇಟಿಯಲ್ಲಿ ಸಾರ್ವಜನಿಕ ಸಾರಿಗೆಗೆ ಆದ್ಯತೆ ನೀಡುವತ್ತಾ ಗಮನಹರಿಸುವ ಪರ್ಯಾಯ ದೃಷ್ಟಿಕೋನವನ್ನು ಪ್ರಸ್ತು ತಪಡಿಸಿದ್ದೆ. ಆದಾಗ್ಯೂ ಉಪಮುಖ್ಯ ಮಂತ್ರಿ ಎಲ್ಲಾ ಪ್ರಸ್ತಾಪಗಳನ್ನು ತಿರಸ್ಕರಿ ಸಿದ್ದಾರೆ. 3 ನಿಮಿಷಗಳ ಫ್ರೀಕ್ವೆನ್ಸಿಯೊಂ ದಿಗೆ ಮೆಟ್ರೋ ಜಾಲವನ್ನು 300 ಕಿ. ಮೀ.ಗೆ ವಿಸ್ತರಿಸುವ ನಮ್ಮ ಯೋಜನೆಗೆ ಅವರು ಒಪ್ಪುವುದಿಲ್ಲವೆಂದರು.

ನಾವು ಬಿಎಂಟಿಸಿ ಸೇವೆಗಳನ್ನು ಬಲ ಪಡಿಸಲು, ಒಳ ನೆರೆ ಹೊರೆಗಳು ಮತ್ತು ಕಿರಿದಾದ ರಸ್ತೆಗಳನ್ನು ಸಂಪರ್ಕಿಸಲು ಸಣ್ಣ ಖಾಸಗಿ ಫೀಡರ್ ಬಸ್‌ಗಳನ್ನು ಪರಿಚಯಿಸಲು ಸೂಚಿಸಿದ್ದೇವೆ. ಬೆಂಗ ಳೂರಿನಲ್ಲಿ ಸಂಚಾರ ದಟ್ಟಣೆ ಚಾಲಕರ ದುಃಸ್ವಪ್ನವಾಗಿದೆ. ಸಾಮಾಜಿಕ ಮಾಧ್ಯ ಮಗಳಲ್ಲಿ ಆಗಾಗ ಆಕ್ರೋಶ ಮತ್ತು ಮೀಮ್‌ಗಳ ವಿಷಯವಾಗಿದೆ. ಸುರಂಗ ರಸ್ತೆ ಯೋಜನೆಯು ಐಟಿ ರಾಜಧಾನಿಯ ಸಂಚಾರ ಸಮಸ್ಯೆಗಳಿಗೆ ದೀರ್ಘಕಾಲೀನ ಪರಿಹಾರವಾಗಿದೆ ಎಂದು ಶಿವ ಕುಮಾರ್ ದೀರ್ಘಕಾಲ ದಿಂದ ವಾದಿಸಿದ್ದಾರೆ. ಸುರಂಗ ರಸ್ತೆ ಯೋಜನೆಯು ಪರಿಸರಕ್ಕೆ ಹಾನಿ ಮಾಡುತ್ತದೆ ಮತ್ತು ಬೆಂಗಳೂರಿನ ಸಂಚಾರ ಸಮಸ್ಯೆಗಳಿಗೆ ಇದು ಸುಸ್ಥಿರ ಪರಿಹಾರವಲ್ಲವೆಂದು ತೇಜಸ್ವಿ ಸೂರ್ಯ ಹೇಳಿದ್ದಾರೆ.

## ಪ್ಯಾರಾ ಸ್ವಿಮ್ಮಿಂಗ್: ರಾಷ್ಟ್ರ ಮಟ್ಟಕ್ಕೆ ಹಿತನ್ ಗೌಡ ಆಯ್ಕೆ

• ಪ್ರಜೋದಯ ವರದಿ

**ಹಾಸನ:** ಕರ್ನಾಟಕ ಪ್ಯಾರಾ ಸ್ವಿಮ್ಮಿಂಗ್ ಅಸೋಸಿಯೇಷನ್ ವತಿ ಯಿಂದ ಬೆಂಗಳೂರಿನಲ್ಲಿ ಇತ್ತೀಚೆಗೆ ನಡೆದ ರಾಜ್ಯ ಮಟ್ಟದ ಪ್ಯಾರಾ ಸ್ವಿಮ್ಮಿಂಗ್ ಸ್ಪರ್ಧೆಯಲ್ಲಿ ನಗರದ ಹಿತನ್‌ಗೌಡ ಮೂರು ಪದಕಗಳನ್ನು ಗೆದ್ದು ರಾಷ್ಟ್ರ ಮಟ್ಟದ ಸ್ಪರ್ಧೆಗೆ ಆಯ್ಕೆಯಾಗಿದ್ದಾರೆ.



100 ಮೀ. ಫ್ರಿ ಸ್ಟೈಲ್‌ನಲ್ಲಿ ಪ್ರಥಮ ಸ್ಥಾನ ಪಡೆದು ಚಿನ್ನ, 50 ಮೀ. ಬಟರ್ ಫ್ಲೈ ಸ್ಪರ್ಧೆಯಲ್ಲಿ ದ್ವಿತೀಯ (ಬೆಳ್ಳಿ) ಹಾಗು 50 ಮೀ. ಫ್ರಿ ಸ್ಟೈಲ್‌ನಲ್ಲಿ ಮೂರನೇ ಸ್ಥಾನ (ಕಂಚು) ತಮ್ಮದಾಗಿಸಿಕೊಂಡಿದ್ದಾರೆ. ನಗರದ ಕುವೆಂಪು ನಗರದ ನಿವಾಸಿ ಗಳಾದ ರವಿಕುಮಾರ್ ಹಾಗು ವೀಣಾ ದಂಪತಿ ಪುತ್ರ ಹಿತನ್‌ಗೌಡ ಆಕ್ಸಫರ್ಡ್ ಶಾಲೆಯಲ್ಲಿ 8ನೇ ತರಗತಿ ವ್ಯಾಸಂಗ ಮಾಡು ತ್ತಿದ್ದಾರೆ. 9ನೇ ವರ್ಷದವನಿದ್ದಾಗಲೇ ಎರಡೂ ಕಾಲುಗಳ ಸ್ವಾಧೀನ ಕಳೆದುಕೊಂಡ ಬಾಲಕ ದೈಹಿಕ ಸವಾಲುಗಳನ್ನು ಮೆಟ್ಟಿ ನಿಂತಿರುವುದು ಸಾಧನೆಯೇ ಸರಿ.

ಹಿತನ್‌ಗೌಡ ಅವರ ಸಾಧನೆಗೆ ದಿವ್ಯಾಂಗ ಪ್ಯಾರಾ ಸ್ಪೋರ್ಟ್ಸ್ ಅಸೋ ಸಿಯೇಷನ್ ಮುಖ್ಯಸ್ಥೆ ಕಮಲಾಕ್ಷಿ, ಮಹಾದೇವ್, ಗಿರೀಶ್, ಮಾದೇಶ ಚಂದ್ರ, ಗೋಪಿನಾಥ್, ದಿವಾಕರ, ಸತ್ಯನಾರಾ ಯಣ, ಸ್ವಿಮ್ಮಿಂಗ್ ತರಬೇತುದಾರರಾದ ನಾಗರಾಜ್, ಕಿರಣ್ ಹಾಗು ಮದನ್ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

ಪ್ರಜೋದಯ ದಿನಪತ್ರಿಕೆ, ಸಂಪಾದಕ, ಪ್ರಕಾಶಕ ಮತ್ತು ಮುದ್ರಕರು, ಜೆ.ಆರ್.ಕೆಂಚೇಗೌಡ, ಗಂಧದ ಕೋಠಿ ಹಿಂಭಾಗ, ಕೆ.ಆರ್.ಪುರಂ.ಹಾಸನ. ದೂರವಾಣಿ : 08172-231188, ಮೊ: 9449203019

C M Y K C M Y K C M Y K C M Y K